ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

18 May 2026 - Page 5

# ಜ್ಞಾನೋತ್ಸವದಲ್ಲಿ ಬೀದರ್‌ನ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿಗೆ ಸಮಗ್ರ ವೀರಾಗ್ರಣಿ ಪ್ರಶಸ್ತಿ

# ಕಲಬುರಗಿಯ ಪೂಜ್ಯ ದೊಡ್ಡಪ್ಪ ಅಪ್ಪ ಇಂಜಿನಿಯರಿಂಗ್ ಕಾಲೇಜ್ ರನ್ನರ್ ಅಪ್

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.17:ನಗರದ ಪ್ರತಿಷ್ಠಿತ ಶರಣಬಸವ ವಿಶ್ವವಿದ್ಯಾಲಯದಲ್ಲಿ ಜರುಗಿದ ಎರಡು ದಿನಗಳ ಜ್ಞಾನೋತ್ಸವ–2026 ಟೆಕ್ನೋ ಕಲ್ಚರಲ್ ಉತ್ಸವಕ್ಕೆ ಶನಿವಾರ ಸಂಜೆ ಅದ್ದೂರಿ ತೆರೆ ಬಿದ್ದಿತು. ವಿವಿಯ ಆವರಣದಲ್ಲಿ ಜರುಗಿದ ಸಮಾರೋಪ ಸಮಾರಂಭದಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ ಹಾಗೂ ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ ನಿರ್ದೇಶಕ ಚಂದ್ರಕಾಂತ ಪಾಟೀಲ ಅವರು ಸಮಗ್ರ ವೀರಾಗ್ರಣಿ ಪ್ರಶಸ್ತಿಯನ್ನು ಬೀದರ್‌ನ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿಗೆ ಹಾಗೂ ರನ್ನರ್ ಅಪ್ ಸ್ಥಾನ ಪಡೆದಿರುವ ಕಲಬುರಗಿಯ ಪೂಜ್ಯ ದೊಡ್ಡಪ್ಪ ಇಂಜಿನಿಯರಿಂಗ್ ಕಾಲೇಜುಗಳ ತಂಡಕ್ಕೆ ಟ್ರೋಫಿ ವಿತರಿಸಿದರು.

ಇದಕ್ಕೂ ಮುನ್ನ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶ್ರೀ ಬಸವರಾಜ ದೇಶಮುಖ ಮಾತನಾಡಿ, ಈ ಜ್ಞಾನೋತ್ಸವ ಯಶಸ್ವಿಯಾಗಿ ಸಂಪನ್ನಗೊಂಡಿರುವುದು ನಮ್ಮೆಲ್ಲರಿಗೂ ಅಪಾರ ಸಂತೋಷವನ್ನುಂಟು ಮಾಡಿದೆ. ಈ ಉತ್ಸವದಲ್ಲಿ ವಿದ್ಯಾರ್ಥಿಗಳು ತಾಂತ್ರಿಕ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆಯನ್ನು ಅತ್ಯುತ್ತಮವಾಗಿ ಪ್ರದರ್ಶಿಸಿದ್ದಾರೆ. ವಿವಿಧ ಸ್ಪರ್ಧೆಗಳು, ಕಾರ್ಯಾಗಾರಗಳು ಮತ್ತು ಮನರಂಜನಾ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಹೊಸ ಉತ್ಸಾಹ ಮತ್ತು ಆತ್ಮವಿಶ್ವಾಸವನ್ನು ತುಂಬಿವೆ ಎಂದರು

ಎಲ್ಲಾ ವಿದ್ಯಾರ್ಥಿಗಳು ತಮ್ಮ ಕೌಶಲ್ಯವನ್ನು ಒಳ್ಳೆಯ ರೀತಿಯಿಂದ ತೋರಿಸಿದ್ದೀರಿ. ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾ ಅವರು ಹಾಕಿ ಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಮುನ್ನಡೆಯೋಣ.



ಮುಂದಿನ ವರ್ಷ ಇನ್ನೂ ಹೆಚ್ಚಿನ ವಿದ್ಯಾರ್ಥಿಗಳು ತಮ್ಮ ಕೌಶಲ್ಯವನ್ನು ಪ್ರದರ್ಶಿಸಬೇಕೆಂದು ಕರೆ ನೀಡಿದರು. ಈ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ, ವಿವಿಯ ಎಲ್ಲಾ ವಿಭಾಗಗಳ ಡೀನರು, ಮುಖ್ಯಸ್ಥರು, ಪ್ರಾಧ್ಯಾಪಕರು ಆಯೋಜಕರು ಹಾಗೂ ವಿದ್ಯಾರ್ಥಿಗಳು ಅಭಿನಂದನಾರ್ಹರು. ಪ್ರತಿಯೊಂದು ವಿಭಾಗವೂ ಶಿಸ್ತಿನಿಂದ ಹಾಗೂ ಸಮರ್ಪಣಾ ಭಾವದಿಂದ ಕಾರ್ಯನಿರ್ವಹಿಸಿ ಉತ್ಸವವನ್ನು ಸ್ಮರಣೀಯವಾಗಿಸಿದೆ. ಭಾಗವಹಿಸಿದ ಪ್ರತಿಯೊಬ್ಬ ವಿದ್ಯಾರ್ಥಿಯ ಸಹಕಾರ ಮತ್ತು ಸಕ್ರಿಯ ಭಾಗವಹಿಸುವಿಕೆ ಈ ಉತ್ಸವದ ವಿಶೇಷತೆಯಾಗಿದೆ. ಈ ಟೆಕ್ನೋ-ಕಲ್ಚರಲ್ ಫೆಸ್ಟ್ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಮಹತ್ವದ ಪಾತ್ರವಹಿಸಿದೆ ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ ನಿರ್ದೇಶಕ ಚಂದ್ರಕಾಂತ ಪಾಟೀಲ ಮಾತನಾಡಿ, ಈ ಭಾಗದ ಶರಣಬಸವ ವಿಶ್ವವಿದ್ಯಾಲಯದಲ್ಲಿ ತಾವೆಲ್ಲ ಅಧ್ಯಯನ ಮಾಡುತ್ತಿರುವುದು ತಮ್ಮ ಸೌಭಾಗ್ಯವೇ ಸರಿ. ಇಲ್ಲಿ ಅಧ್ಯಯನದೊಂದಿಗೆ ಮಾನವೀಯ ಮೌಲ್ಯಗಳನ್ನು ಕಲಿಯುತ್ತೀರಿ. ಇಲ್ಲಿ ಕಲಿತವರು ಮುಂದೆ ಎಲ್ಲಾ ರಂಗಗಳಲ್ಲಿಯೂ ಯಶಸ್ಸನ್ನು ಕಾಣುವಿರಿ. ಶರಣಬಸವ ವಿವಿ ಅನೇಕ ತಾಂತ್ರಿಕ ಕೋರ್ಸ್‌ಗಳನ್ನು ಹೊಂದಿದೆ. ಇದರಿಂದ ಈ ಭಾಗದ ಮಕ್ಕಳಿಗೆ ತಾಂತ್ರಿಕ ಜ್ಞಾನವನ್ನು ವೃದ್ಧಿಸಲು ಅನುಕೂಲವಾಗಿದೆ ಎಂದು ಹೇಳಿದರು.

ಮೊಬೈಲ್‌ನ್ನು ಹೆಚ್ಚು ಬಳಸದೇ ತಂದೆ ತಾಯಿಯರಿಗೆ, ಶಿಕ್ಷಕರಿಗೆ ಗೌರವ ಕೊಟ್ಟು ಸಂಸ್ಕೃತಿಯನ್ನು ಕಾಪಾಡಿ.

ಹೆಚ್ಚು ಪುಸ್ತಕಗಳನ್ನು ಓದಿ. ಅಂಕಗಳಿಗೆಗಷ್ಟೇ ಸಿಮಿತವಾಗದೇ ಕೌಶಲ್ಯವನ್ನು ವೃದ್ಧಿಸಿ ಸಾಧನೆ ಮಾಡಿ. ಎಲ್ಲರ ಜೊತೆ ಪ್ರೀತಿ, ವಿಶ್ವಾಸ, ಬಾಂಧವ್ಯದಿಂದಿರಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತನ್ನು ಹೇಳಿದರು.

ಈ ಸಂಭ್ರಮದ ಸಮಾರೋಪ ಸಮಾರಂಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು. ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಪ್ರೊ. ಅನಿಲಕುಮಾರ ಬಿಡವೆ, ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ ಮಾಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಹಣಕಾಸು ಅಧಿಕಾರಿ ಡಾ. ಕಿರಣ ಮಾಕಾ, ಸಂಶೋಧನಾ ಡೀನ್ ಡಾ. ಸುಜಾತಾ ಮಲ್ಲಾಪುರ ವೇದಿಕೆ ಮೇಲಿದ್ದರು. ವಿವಿಯ ಎಲ್ಲಾ ವಿಭಾಗಗಳ ಡೀನರು, ಮುಖ್ಯಸ್ಥರು, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಜ್ಞಾನೋತ್ಸವ–2026 ಟೆಕ್ನೊ ಕಲ್ಚರಲ್ ಫೆಸ್ಟ್ ಸಮಾರೋಪ ಸಮಾರಂಭದಲ್ಲಿ ಎಲ್ಲಾ ಅತಿಥಿ ಗಣ್ಯರನ್ನು ಶರಣಬಸವ ವಿಶ್ವವಿದ್ಯಾಲಯದ ಡೀನ್ ಡಾ. ಶಿವಕುಮಾರ ಜವಳಗಿ ಸ್ವಾಗತಿಸಿದರು.

## ಐಸಿಐಎಸ್‌ಸಿಎನ್-2026 ವಿಷಯದ 2ನೇ ಅಂತಾರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ

# ಸಂಶೋಧನೆಗೆ ಸಮ್ಮೇಳನ ಸಹಕಾರಿ

■ **ವಿಕಸುದ್ದಿಲೋಕ** ಬೀದರ್

ಇಲ್ಲಿನ ಲಿಂಗರಾಜಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಎರಡು ದಿನಗಳ ಇಂಟೆಲಿಜೆಂಟ್ ಸಿಸ್ಟಮ್ಸ್ ಮತ್ತು ಕಂಪ್ಯೂಟೇಶನಲ್ ನೆಟ್‌ವರ್ಕ್ಸ್ (ಐಸಿಐಎಸ್‌ಸಿಎನ್-2026) ವಿಷಯದ 2ನೇ ಅಂತಾರಾಷ್ಟ್ರೀಯ ಸಮ್ಮೇಳನ ಆರಂಭಗೊಂಡಿದೆ.

ಐಇಇಇ ಬೆಂಗಳೂರು ಸೆಕ್ಷನ್, ಐಇಇಇ ಕಂಪ್ಯೂಟೇಶನಲ್ ಇಂಟೆಲಿಜೆನ್ಸಿ ಸೊಸೈಟಿ ಹಾಗೂ ಐಇಇಇ ಉತ್ತರ ಕರ್ನಾಟಕ ಉಪ ವಿಭಾಗದ ತಾಂತ್ರಿಕ ಸಹಯೋಗದಲ್ಲಿ ಸಮ್ಮೇಳನ ನಡೆಯುತ್ತಿದೆ. ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಮಹಾವಿದ್ಯಾಲಯದ ಕಾರ್ಯದರ್ಶಿ ಬಸವರಾಜ ದೇಶಮುಖ ಅವರು, ವಿದ್ಯಾರ್ಥಿಗಳ ಜ್ಞಾನದ ಅಭಿವೃದ್ಧಿಗೆ ಮತ್ತು ಸಂಶೋಧನೆಗೆ ಪಠ್ಯೇತರ ಚಟುವಟಿಕೆಗೆ ಈ ಸಮ್ಮೇಳನವು ಸಹಕಾರಿಯಾಗಲಿದೆ ಎಂದರು.

ದಕ್ಷಿಣ ಕೊರಿಯಾದ ಡೋಂಗ್ಸಿಯೋ ವಿಶ್ವವಿದ್ಯಾಲಯದ ಡಾ. ಡೇ-ಕಿ ಕಾಂಗ್ ಹಾಗೂ ಐಐಟಿ ಖರಗ್ಪುರದ ಡಾ. ದೇವದಿತ್ಯ ರಾಯ್ ಜತೆಗೆ ಸ್ಪೇನ್, ಇಟಲಿ ಮತ್ತು ಮೆಕ್ಸಿಕೋ ದೇಶಗಳ ಖ್ಯಾತ ತಜ್ಞರು ತಾಂತ್ರಿಕ ಉಪನ್ಯಾಸಗಳನ್ನು ನೀಡಿದರು. ಬೀದರ್‌ನ ಗುರುನಾನಕ್ ದೇವ್ ಎಂಜಿನಿಯರಿಂಗ್ ಕಾಲೇಜಿನ ಡಾ.ಸವಿತಾ ಸೋಮ ಅವರು ಪಾಲ್ಗೊಂಡಿದ್ದರು. ಸಮ್ಮೇಳನದ ಮುಖ್ಯ ಉದ್ದೇಶ ಇಂಟೆಲಿಜೆಂಟ್ ಸಿಸ್ಟಮ್ಸ್ ಮತ್ತು ಕಂಪ್ಯೂಟೇಶನಲ್ ನೆಟ್‌ವರ್ಕ್ಸ್ ಕ್ಷೇತ್ರದಲ್ಲಿ ನಡೆಯುತ್ತಿರುವ ಹೊಸ ಸಂಶೋಧನೆಗಳನ್ನು ಹಂಚಿಕೊಳ್ಳುವುದು ಹಾಗೂ ವಿದ್ಯಾರ್ಥಿಗಳು ಮತ್ತು ಸಂಶೋಧಕರಿಗೆ ತಾಂತ್ರಿಕ ಜ್ಞಾನವನ್ನು ವಿಸ್ತರಿಸುವುದಾಗಿದೆ.

ಇಟಲಿ, ಸ್ಪೇನ್, ಟರ್ಕಿ, ಮಲೇಷ್ಯಾ ಇಂಡೋನೇಷ್ಯಾ, ಥೈಲ್ಯಾಂಡ್, ವಿಯೆಟ್ನಾಂ ಸೇರಿದಂತೆ ಅನೇಕ ದೇಶಗಳಿಂದ ಹಾಗೂ ಭಾರತದ ಪ್ರಮುಖ ಸಂಸ್ಥೆಗಳಾದ ಐಐಟಿ, ಎನ್‌ಐಟಿ, ಐಐಐಟಿಗಳಿಂದ ಸುಮಾರು 1700 ಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳು ಸಲ್ಲಿಕೆಯಾಗಿವೆ. ಈ ಪೈಕಿ 274 ಗುಣಮಟ್ಟದ ಪ್ರಬಂಧಗಳನ್ನು ಆಯ್ಕೆ ಮಾಡಲಾಗಿದೆ.

ವಿವಿಧ ತಾಂತ್ರಿಕ ಸತ್ರಗಳು, ಪೇಪರ್ ಪ್ರೆಸೆಂಟೇಶನ್‌ಗಳು ಹಾಗೂ ಚರ್ಚೆಗಳು ನಡೆದವು. ವಿಶ್ವದ ವಿವಿಧ ದೇಶಗಳಿಂದ ಗಣ್ಯ ವಿಜ್ಞಾನಿಗಳು, ಪ್ರಾಧ್ಯಾಪಕರು ಮತ್ತು ಸಂಶೋಧಕರು ಭಾಗವಹಿಸಿ ತಮ್ಮ ಸಂಶೋಧನಾ ಪ್ರಬಂಧಗಳನ್ನು ಮಂಡಿಸಿದರು. ಸಮ್ಮೇಳನವನ್ನು ಲಿಂಗರಾಜಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡದ್ದಕ್ಕಾಗಿ ಸಂಸ್ಥೆಯ ಅಧ್ಯಕ್ಷರಾದ ಮಾತೋಶ್ರೀ ದಾಕ್ಷಾಯಿಣಿ ಎಸ್ ಅಪ್ಪ ಅವರು ಹರ್ಷ ವ್ಯಕ್ತಪಡಿಸಿದ್ದಾರೆ. ಪ್ರಾಂಶುಪಾಲರಾದ ಡಾ. ವಿನೀತಾ ಪಾಟೀಲ್ ಸ್ವಾಗತಿಸಿದರು. ಡಾ. ವಿವೇಕ್ ಜಲಾದಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ.ದೀಪಿಕಾ ನಿರೂಪಿಸಿದರು. ಐಇಇಇ ವಿದ್ಯಾರ್ಥಿ ಶಾಖೆಯ ಸಲಹೆಗಾರ ಡಾ.ಬಸವಲಿಂಗ ಸ್ವಾಮಿ ವಂದಿಸಿದರು. ಕಾರ್ಯಕ್ರಮದಲ್ಲಿ ಎಲ್ಲ ವಿಭಾಗದ ಮುಖ್ಯಸ್ಥರು, ಉಪನ್ಯಾಸಕರು, ವಿದ್ಯಾರ್ಥಿ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

ಕಲಬುರಗಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಪೂಜ್ಯ ಮಾತೋಶ್ರೀ ಡಾ. ದಾಕ್ಷಾಯಣಿ ಎಸ್ ಅಪ್ಪ ಹಾಗೂ ಕಲಬುರಗಿ ಶರಣಬಸವೇಶ್ವರ ಸಂಸ್ಥಾನದ 09ನೇ ಮಹಾದಾಸಗೋದ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪ ಇವರ ಆಶೀರ್ವಾದದೊಂದಿಗೆ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಕಾಲೇಜಿನ ಪ್ರಕಟಣೆ ತಿಳಿಸಿದೆ.



**ಬೀದರ್‌ನ ಲಿಂಗರಾಜಪ್ಪ ಅಪ್ಪ ಎಂಜಿನೀಯರಿಂಗ್ ಕಾಲೇಜಿನಲ್ಲಿ ಶುಕ್ರವಾರ ಎರಡು ದಿನಗಳ ಐಸಿಐಎಸ್‌ಸಿಎನ್-2026 ವಿಷಯದ 2ನೇ ಅಂತಾರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ ನೀಡಲಾಯಿತು.**

ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರಗಿ, ಬೀದರ್, ಬಳ್ಳಾರಿ, ವಿಜಯನಗರ, ಬಾಗಲಕೋಟೆ, ಬೆಂಗಳೂರು ಒಂದೇ ಆವೃತ್ತಿಯಲ್ಲಿ ಪ್ರಕಟ

ಈಶಾನ್ಯ ಟೈಮ್ಸ್

ESHANYA TIMES, REGIONAL KANNADA DAILY

ESHANYA TIMES

RNI : KARKAN/2006/22679

ಪ್ರಾದೇಶಿಕ ಕನ್ನಡ ದಿನಪತ್ರಿಕೆ

website: eshanyatimes.in Email: eshanyatimes@gmail.com Mob: 9448571514 / 9448151555 RNI : KARKAN/2006/22679

# ಲಿಂಗರಾಜಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ರಾಷ್ಟ್ರೀಯ ಸಮ್ಮೇಳನ ಯಶಸ್ವಿಯಾಗಿ ಆಯೋಜನೆ

*ಬೀದರ್,ಮೇ.23:*

ನಗರದ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ''ಇತ್ತೀಚಿನ ಇಂಜಿನಿಯರಿಂಗ್ ಮತ್ತು ನಿರ್ವಹಣಾ ಅಧ್ಯಯನಗಳ ಪ್ರಚಲಿತ ಪ್ರವೃತ್ತಿಗಳು'' ವಿಷಯದ ಕುರಿತು 2ನೇ ರಾಷ್ಟ್ರೀಯ ಸಮ್ಮೇಳನ (RTEMS-2026) ಮೇ 23, 2026 ರಂದು IETE ಸ್ಟುಡೆಂಟ್ ಫೋರಂ ಸಹಯೋಗದೊಂದಿಗೆ ಕಾಲೇಜಿನ ಯಶಸ್ವಿಯಾಗಿ ನಡೆಯಿತು.

ಈ ಕಾರ್ಯಕ್ರಮವು ಪೂಜ್ಯ ಮಾತೋಶ್ರೀ ಡಾ. ದಾಕ್ಷಾಯಣಿ ಎಸ್ ಅಪ್ಪ, ಅಧ್ಯಕ್ಷರು ಶರಣಬಸವೇಶ್ವರ ವಿದ್ಯಾವರ್ಧಕ ಸಂಘ ಕಲಬುರ್ಗಿ ಹಾಗೂ ಪೂಜ ದೊಡ್ಡಪ್ಪ ಅಪ್ಪ, ಒಂಬತ್ತನೇ ಮಹಾದಾಸೋಹ ಪೀಠಾಧಿಪತಿ ಶರಣಬಸವೇಶ್ವರ ಸಂಸ್ಥಾನ ಕಲ್ಬುರ್ಗಿ ಇವರ ಆಶೀರ್ವಾದದೊಂದಿಗೆ ಮಹಾವಿದ್ಯಾಲಯದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ್ ದೇಶಮುಖ್ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಮುಖ್ಯ ಅತಿಥಿಗಳಾಗಿ ಶರಣಬಸವ ವಿಶ್ವವಿದ್ಯಾಲಯದ ನಿರ್ದೇಶಕರಾದ ಡಾ. ವಿ.ಡಿ. ಮ್ಯಾತ್ರಿ ಅವರು ಮಾತನಾಡಿ ತಂತ್ರಜ್ಞಾನ ಮತ್ತು ನಿರ್ವಹಣ ಅಧ್ಯಯನ ಎರಡು ಒಂದನ್ನೊಂದು ಅವಲಂಬಿತವಾಗಿದೆ, ಇತ್ತೀಚಿನ ತಂತ್ರಜ್ಞಾನಗಳಾದ ಎಐ,ಎಂಎಲ್, IOT, ಡೇಟ ಅನಾಲಿಟಿಕ್ಸ್ ಕ್ವಾಂಟಮ್ ಕಂಪ್ಯೂಟಿಂಗ್, ಇವುಗಳ ಬಗ್ಗೆ ಅಧ್ಯಯನ ಮಾಡಬೇಕು ಎಂದು ತಿಳಿಸಿದರು ನಮ್ಮ ದೇಶದಲ್ಲಿ ಆತ್ಮನಿರ್ಬಾರ್ ಭಾರತ್, ವಿಕಸಿತ ಭಾರತ ಯೋಚನೆಗಳು ನಡೆದಿದೆ ಹಾಗೂ ಅತಿ ಶಕ್ತಿಶಾಲಿ ಡ್ರೋನ್ ಲೇಸರ್ಸ್‌ಗಳು ತಯಾರಾಗುತ್ತಿವೆ ಎಂದು ಹೇಳಿದರು. ಇನ್ನೋರ್ವ ಅತಿಥಿ ಶರಣಬಸವ ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವರಾದ ಡಾ. ಎಸ್.ಹೆಚ್. ಹೊನ್ನಳ್ಳಿ ಇತ್ತೀಚಿನ ತಂತ್ರಜ್ಞಾನವಾದ ಎಐ ಆರ್ಟಿಫಿಶಿಯಲ್



ಇಂಟಲಿಜೆನ್ಸ್ ಬಗ್ಗೆ ಮಾತನಾಡಿ ಆರ್ಟಿಫಿಷಿಯಲ್ ಇಂಟೀರಿಯರ್ಸ್‌ನಲ್ಲಿ ಮನುಷ್ಯನ ಭಾವನಾತ್ಮಕ ಸಂಬಂಧಗಳಿರುವುದಿಲ್ಲ ಹಾಗೂ ಕೆಲಸದ ಬಗ್ಗೆ ಸಮಗ್ರತೆ ಇರುವುದಿಲ್ಲ ಹಾಗಾಗಿ ಆರ್ಟಿಫಿಷಿಯಲ್ ಇಂಟಲಿಜೆನ್ಸ್ ಅನ್ನು ಸಮಗ್ರ ಮನುಷ್ಯನ ಕಾರ್ಯನಿರ್ವಣೆಯನ್ನು ಹಾಗೂ ಕ್ಷಮತೆಯನ್ನು ಬದಲಿಸಲು ಆಗುವುದಿಲ್ಲ ಎಂದು ತಿಳಿಸಿದರು. ಸುಸ್ಥಿರ ಇಂಧನ ಅಭಿವೃದ್ಧಿ, ಸುಸ್ಥಿರ ವ್ಯವಹಾರ ಅಭಿವೃದ್ಧಿ, ಜನರ ನಿರ್ವಹಣೆ ಬಗ್ಗೆ ಹೆಚ್ಚು ಸಂಶೋಧನೆ ಮಾಡಬೇಕಾಗಿ ಕರೆ ನೀಡಿದರು. ಕಾರ್ಯಕ್ರಮದ ಮುಖ್ಯ ಅಧ್ಯಕ್ಷ ಸ್ಥಾನವನ್ನು ವಹಿಸಿಕೊಂಡಿರುವ ಮಹಾವಿದ್ಯಾಲಯದ ನಿರ್ದೇಶಿಕಿಯಾದ ಡಾ. ಉಮಾತಾಯಿ ದೇಶಮುಖ್ ಅವರು ಮಾತನಾಡಿ ಈ ಸಮ್ಮೇಳನವು ಹಲವು ತಾಂತ್ರಿಕ ಹಾಗೂ ನಿರ್ವಹಣಾ ಅಧ್ಯಯನಗಳಿಗೆ ಸಹಕಾರಿ ಆಗಿದೆ ಇನ್ನು ಹೆಚ್ಚಿನ ಅಧ್ಯಯನಕ್ಕೆ ನಮ್ಮ ಮಹಾವಿದ್ಯಾಲಯವು ಶ್ರಮಿಸಲಿದೆ ಎಂದು ಶುಭ ಕೋರಿದರು.

ಕಾರ್ಯಕ್ರಮದ ಸಂಚಾಲಕರಾಗಿ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ. ವಿನಿತಾ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕ ಮಾತುಗಳನ್ನು ಆಡಿ ಈ ಸಮ್ಮೇಳನದ ಪ್ರಮುಖ ಧ್ಯೇಯವೆಂದರೆ ನಮ್ಮ ಅಂತಿಮ ವರ್ಷದ ವಿದ್ಯಾರ್ಥಿಗಳು ಸಂಶೋಧನಾ ಪ್ರಬಂಧಗಳನ್ನು ಮಂಡಿಸಲು ಮತ್ತು ಎಂಜಿನಿಯರಿಂಗ್ ನಲ್ಲಿಯೇ ತಮ್ಮ ಆಲೋಚನೆಗಳನ್ನು ಪ್ರದರ್ಶಿಸಲು ಪ್ರೋತ್ಸಾಹಿಸುವುದು ಮತ್ತು ಸಬಲೀಕರಣಗೊಳಿಸುವುದು.

ಸಮ್ಮೇಳನದಲ್ಲಿ ಪ್ರಬಂಧವನ್ನು ಮಂಡಿಸುವುದು ಹೆಮ್ಮೆಯ ಶೈಕ್ಷಣಿಕ ಸಾಧನೆಯಾಗಿದೆ.

ಇದು ನಿಮ್ಮ ಸಂವಹನ ಕೌಶಲ್ಯವನ್ನು ಬಲಪಡಿಸುತ್ತದೆ, ನಿಮ್ಮ ಪುನರಾರಂಭವನ್ನು ಹೆಚಿಸುತ್ತದೆ, ಉನ್ನತ ಅಧ್ಯಯನ ಮತ್ತು ಉದ್ಯೋಗ ನಿಯೋಜನೆಗಳಿಗೆ ನಿಮ್ಮನ್ನು ಸಿದ್ಧಪಡಿಸುತ್ತದೆ ಮತ್ತು ಸಂಶೋಧನೆ ಮತ್ತು ನಾವೀನ್ಯತೆಯ ಸಂಸ್ಕೃತಿಗೆ ನಿಮ್ಮನ್ನು ಪರಿಚಯಿಸುತ್ತದೆ. ಇಂದಿನ ಕೈಗಾರಿಕೆಗಳು ಅಂಕಗಳನ್ನು ಗಳಿಸುವವರಲ್ಲದೆ - ಪರಿಣಾಮಕಾರಿಯಾಗಿ ಯೋಚಿಸುವ, ನಾವೀನ್ಯತೆ ನೀಡುವ ಮತ್ತು ವಿಚಾರಗಳನ್ನು ಪ್ರಸ್ತುತಪಡಿಸುವ ಪದವೀಧರರನ್ನು ಹುಡುಕುತ್ತಿವೆ. ನಮ್ಮ ಎಲ್ಲಾ ಅಂತಿಮ ವರ್ಷದ ವಿದ್ಯಾರ್ಥಿಗಳು ಸಮ್ಮೇಳನಕ್ಕಾಗಿ ಪ್ರಬಂಧಗಳನ್ನು ಸಲ್ಲಿಸಿದ್ದಾರೆ ಮತ್ತು ಮಧ್ಯಾಹ್ನದ ಅವಧಿಯಲ್ಲಿ ತಮ್ಮ ಪ್ರಬಂಧಗಳನ್ನು ಮಂಡಿಸಲಿದ್ದಾರೆ ಎಂದು ಹೇಳಲು ನನಗೆ ಸಂತೋಷವಾಗಿದೆ.

ಇದಕ್ಕೆ ಕೇವಲ ವಿದ್ಯಾರ್ಥಿಗಳಿಗೆ ಮಾತ್ರವಲ್ಲದೆ, ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ ಮತ್ತು ಪ್ರಬಂಧಗಳನ್ನು ಮಂಡಿಸಲು ಪ್ರೇರೇಪಿಸಿದ ಮಾರ್ಗದರ್ಶಿಗಳಿಗೂ ಸಹ ಶ್ರೇಯಸ್ಸು ಸಲ್ಲುತ್ತದೆ. ಸುಮಾರು ಎರಡು ನೂರಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳು ಸಲ್ಲಿಕೆ ಆಗಿದವು ಅದರಲ್ಲಿ 80 ಪ್ರಬಂಧಗಳು ಆಯ್ಕೆ ಮಾಡಿ ಆಫ್ ಲೈನ್ ಹಾಗೂ ಆನ್ಲೈನ್ ಅವಧಿಯಲ್ಲಿ ವಿದ್ಯಾರ್ಥಿಗಳು ಮಂಡಿಸಲಿದ್ದಾರೆ ಎಂದು ತಿಳಿಸಿದರು.

ಪ್ರಮುಖ ಉಪನ್ಯಾಸಕರಾಗಿ GNIT ಕಾಲೇಜಿನ ಡೀನ್ ಅಕಾಡೆಮಿಕ್ಸ್ ಡಾ. ಶತ್ರುಘ್ನ ಪ್ರಸಾದ್ ಯಾದವ್ 6G ನೆಟ್ವರ್ಕ್‌ಗಳಲ್ಲಿ ಮುಂದಿನ ಪೀಳಿಗೆಯ ಡಿಜಿಟಲ್ ವೀಡಿಯೊ ಪ್ರಸಾರ: ಪುನರ್ರಚಿಸಬಹುದಾದ ಬುದ್ಧಿವಂತ ಮೇಲ್ಮೈಗಳನ್ನು (RIS), ಫೆಡರೇಟೆಡ್ ಕಲಿಕೆ (FL), ಮತ್ತು ಕ್ವಾಂಟಮ್ ಕಂಪ್ಯೂಟಿಂಗ್ ಅನ್ನು ಸಂಯೋಜಿಸುವುದು ಎಂಬ ವಿಷಯದ ಕುರಿತು ವಿಚಾರ ಮಂಡಿಸಿದರು.

ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜಿನ ಕೃತಕ ಬುದ್ಧಿಮತ್ತೆ ಮತ್ತು ಮೆಷಿನ್ ಲರ್ನಿಂಗ್ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಜಸ್ಮಿನೀತ್ ಕೌರ್ ಅವರು AI, IoT ಮತ್ತು ಸ್ಮಾರ್ಟ್ ಸಿಸ್ಟಮ್ಸ್: ಎಂಜಿನಿಯರಿಂಗ್ ನಾವೀನ್ಯತೆಯ ಭವಿಷ್ಯ ವಿಷಯಗಳ ಕುರಿತು ಉಪನ್ಯಾಸ ನೀಡಿದರು.

ಸಮ್ಮೇಳನದ ಸಂಶೋಧನಾ ಪ್ರಬಂಧ ಪುಸ್ತಕವನ್ನು ವೇದಿಕೆ ಮೇಲಿನ ಗಣ್ಯರು ಬಿಡುಗಡೆ ಮಾಡಿದರು. ಕಾರ್ಯಕ್ರಮವನ್ನು ಡಾ. ಸಾಗರ್ ಕುಮಾರ್ ಬುಯ್ಯ ನಿರೋಪಿಸಿದರು, ಹಾಗೂ ಡಾ. ಬಸವಲಿಂಗ ಸ್ವಾಮಿ ಹಿರೇಮಠ ಅವರು ವಂದಿಸಿದರು, ಎಲ್ಲಾ ವಿಭಾಗದ ಮುಖ್ಯಸ್ಥರು ಉಪನ್ಯಾಸಕರ ವೃಂದ ಹಾಗೂ ವಿದ್ಯಾರ್ಥಿ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.


Powered By KHUSHIHOST ® | License - ePaperCloud.com




Matoshree Pujya Dr Dakshayani Avvaji inaugurates the Job Fair | EXPRESS

# 327 students receive appointment letters at 'Massive Job Fair-2026'

**EXPRESS NEWS SERVICE**
@ Bidar

THE 'Massive Job Fair-2026' organised at Lingaraj Appa Engineering College recently with the aim of providing job opportunities to students received an unprecedented response. Thousands of students from various colleges participated in this fair, and more than 45 prestigious companies conducted recruitment processes and distributed job appointment letters to 327 candidates.

Matoshree Pujya Dr Dakshayani Avvaji, president of Sharanabasaveshwara Vidyavardhaka Sangha and Chancellor of Sharanabasava University, and Pujya Doddappa Appa, 9th Mahadasoha Peethadhipati of Sharanabasaveshwara Sansthan blessed the occasion. Basavaraj S Deshmukh, secretary of the Sangha, who presided over the programme at the job fair, said that in today's competitive era, along with a degree, skills are also very important. He advised the students to understand the needs of the industries through such job fairs and shape their careers. Dr Shailendra Beldale, MLA of South constituency of Bidar district, greeted all the students through a video message. Inaugurating the programme, Neeta Shailendra Beldale appreciated the work of the college in organising such a huge job fair. Finally, job appointment letters were distributed to 327 students.

ಕನ್ನಡಪ್ರಭ

# ಲಿಂಗರಾಜಪ್ಪ ಅಪ್ಪ ಕಾಲೇಜಲ್ಲಿ ರಾಷ್ಟ್ರೀಯ ಸಮ್ಮೇಳನ

• **ಕನ್ನಡಪ್ರಭ ವಾರ್ತೆ** ಬೀದರ್

ನಗರದ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ 'ಇತ್ತೀಚಿನ ಇಂಜಿನಿಯರಿಂಗ್ ಮತ್ತು ನಿರ್ವಹಣಾ ಅಧ್ಯಯನಗಳ ಪ್ರಚಲಿತ ಪ್ರವೃತ್ತಿಗಳು' ವಿಷಯದ ಕುರಿತು 2ನೇ ರಾಷ್ಟ್ರೀಯ ಸಮ್ಮೇಳನ (TEMS-2026) ಮೇ 23ರಂದು ಐಇಇಇ ಸ್ಟೂಡೆಂಟ್ ಫೋರಂ ಸಹಯೋಗದೊಂದಿಗೆ ಯಶಸ್ವಿಯಾಗಿ ನಡೆಯಿತು.

ಪೂಜ್ಯ ಮಾತೋಶ್ರೀ ಡಾ.ದಾಕ್ಷಾಯಣಿ ಎಸ್. ಅಪ್ಪ, ಅಧ್ಯಕ್ಷರು ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘ ಕಲಬುರ್ಗಿ ಹಾಗೂ ದೊಡ್ಡಪ್ಪ ಅಪ್ಪ, ಒಂಬತ್ತನೇ ಮಹಾ ದಾಸೋಹ ಪೀಠಾಧಿಪತಿ ಶರಣ ಬಸವೇಶ್ವರ ಸಂಸ್ಥಾನ ಕಲಬುರಗಿ ಇವರ ಆಶೀರ್ವಾದ ದೊಂದಿಗೆ ಮಹಾವಿದ್ಯಾಲಯದ ಕಾರ್ಯದರ್ಶಿ ಬಸವರಾಜ್ ದೇಶಮುಖ್ ಮಾರ್ಗ ದರ್ಶನದಲ್ಲಿ ಕಾರ್ಯಕ್ರಮ ಆಯೋಜಿಸ ಲಾಯಿತು.

ಶರಣಬಸವ ವಿಶ್ವವಿದ್ಯಾಲಯದ ನಿರ್ದೇಶಕರಾದ ಡಾ. ವಿ.ಡಿ.ಮ್ಯಾತ್ರಿ ಮಾತನಾಡಿ, ತಂತ್ರಜ್ಞಾನ ಮತ್ತು ನಿರ್ವಹಣೆ ಅಧ್ಯಯನ ಎರಡು ಒಂದನ್ನೊಂದು ಅವಲಂಬಿತವಾಗಿದೆ. ಇತ್ತೀಚಿನ ತಂತ್ರಜ್ಞಾನಗಳಾದ ಎಐ, ಎಂಎಲ್, ಐಒಟಿ, ಡೇಟಾ ಅನಾಲಿಟಿಕ್ಸ್ ಕ್ವಾಂಟಮ್ ಕಂಪ್ಯೂಟಿಂಗ್, ಇವುಗಳ ಬಗ್ಗೆ ಅಧ್ಯಯನ ಮಾಡಬೇಕು ಎಂದು ತಿಳಿಸಿದರು.

ಶರಣಬಸವ ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವರಾದ ಡಾ.ಎಸ್.ಹೆಚ್.ಹೊನ್ನಳ್ಳಿ ಇತ್ತೀಚಿನ ತಂತ್ರಜ್ಞಾನವಾದ ಎಐ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಬಗ್ಗೆ ಮಾತನಾಡಿ, ಆರ್ಟಿಫಿಷಿಯಲ್ ಇಂಟಲಿಜನ್ಸ್‌ನಲ್ಲಿ ಮನುಷ್ಯನ ಭಾವನಾತ್ಮಕ ಸಂಬಂಧಗಳಿರುವುದಿಲ್ಲ ಹಾಗೂ ಕೆಲಸದ ಬಗ್ಗೆ ಸಮಗ್ರತೆ ಇರುವುದಿಲ್ಲ ಹಾಗಾಗಿ ಆರ್ಟಿಫಿಷಿಯಲ್ ಇಂಟಲಿ ಜೆನ್ಸ್ ಅನ್ನು ಸಮಗ್ರ ಮನುಷ್ಯನ ಕಾರ್ಯನಿರ್ವಹಣೆಯನ್ನು ಹಾಗೂ ಕ್ಷಮತೆಯನ್ನು ಬದಲಿಸಲು ಆಗುವುದಿಲ್ಲ ಎಂದು ತಿಳಿಸಿದರು.

ಮಹಾವಿದ್ಯಾಲಯದ ನಿರ್ದೇಶಕಿಯಾದ ಡಾ.ಉಮಾ ದೇಶಮುಖ್ ಮಾತನಾಡಿ, ಈ ಸಮ್ಮೇಳನವು ಹಲವು ತಾಂತ್ರಿಕ ಹಾಗೂ ನಿರ್ವಹಣಾ ಅಧ್ಯಯನಗಳಿಗೆ ಸಹಕಾರಿ ಆಗಿದೆ. ಇನ್ನೂ ಹೆಚ್ಚಿನ ಅಧ್ಯಯನಕ್ಕೆ ನಮ್ಮ ಮಹಾ ವಿದ್ಯಾಲಯವು ಶ್ರಮಿಸಲಿದೆ ಎಂದು ಶುಭ ಕೋರಿದರು.

ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ.ವಿನಿತಾ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕ ಮಾತ ನಾಡಿದರು. ಡಾ.ಸಾಗರ್‌ಕುಮಾರ್ ಬುಯ್ಯ ನಿರೂಪಿಸಿದರು, ಡಾ.ಬಸವಲಿಂಗ ಸ್ವಾಮಿ ಹಿರೇಮಠ ವಂದಿಸಿದರು.

ಸುಮಾರು ಎರಡು ನೂರಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳು ಸಲ್ಲಿಕೆ ಆಗಿದವು ಅದರಲ್ಲಿ 80 ಪ್ರಬಂಧಗಳು ಆಯ್ಕೆ ಮಾಡಿ ಆಫ್‌ಲೈನ್ ಹಾಗೂ ಆನ್ಲೈನ್ ಅವಧಿಯಲ್ಲಿ ವಿದ್ಯಾರ್ಥಿಗಳು ಮಂಡಿಸಲಿದ್ದಾರೆ ಎಂದು ತಿಳಿಸಿದರು.

ಪ್ರಮುಖ ಉಪನ್ಯಾಸಕರಾಗಿ ಜಿಎನ್ ಐಟಿ ಕಾಲೇಜಿನ ಡೀನ್ ಆಕಾಡೆಮಿಕ್ಸ್ ಡಾ.ಶತ್ರುಘ್ನ ಪ್ರಸಾದ್ ಯಾದವ್, ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜಿನ ಕೃತಕ ಬುದ್ಧಿಮತ್ತೆ ಮತ್ತು ಮೆಷಿನ್ ಲರ್ನಿಂಗ್ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಜಸ್ಮಿನೀತ್ ಕೌರ್ ಪಾಲ್ಗೊಂಡಿದ್ದರು.



ಬೀದರ್‌ನ ಲಿಂಗರಾಜ ಅಪ್ಪ ಕಾಲೇಜಿನಲ್ಲಿ ನಡೆದ ಸಮ್ಮೇಳನದಲ್ಲಿ ಸಂಶೋಧನಾ ಪ್ರಬಂಧ ಪುಸ್ತಕವನ್ನು ಗಣ್ಯರು ಬಿಡುಗಡೆ ಮಾಡಿದರು.


ಕರ್ನಾಟಕ ಸರ್ಕಾರ

**ಅಬಕಾರಿ ಇಲಾಖೆ**

**ಅಬಕಾರಿ ಉಪ ಆಯುಕ್ತರವರ ಕಾರ್ಯಾಲಯ ಯಾದಗಿರಿ ಜಿಲ್ಲೆ: ಯಾದಗಿರಿ**

-:ಪತ್ರಿಕಾ ಪ್ರಕಟಣೆ:-

ಯಾದಗಿರಿ ಜಿಲ್ಲಾ ಅಬಕಾರಿ ಇಲಾಖೆಯ ವತಿಯಿಂದ, ಮಾನ್ಯ ಅಬಕಾರಿ ಉಪ ಆಯುಕ್ತರು ಯಾದಗಿರಿ ಜಿಲ್ಲೆ ರವರ ಆದೇಶದ ಮೇರೆಗೆ, ವಿವಿಧ ಪ್ರಕರಣಗಳಲ್ಲಿ ಮುಟ್ಟುಗೋಲು ಹಾಕಿಕೊಂಡಿರುವ ವಿವಿಧ ಮಾದರಿಯ 15 ವಾಹನಗಳ ಬಹಿರಂಗ ಹರಾಜು ಪ್ರಕ್ರಿಯೆಯನ್ನು ಯಾದಗಿರಿ ವಲಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಹರಾಜು ಪ್ರಕ್ರಿಯೆಯು ದಿನಾಂಕ 26/05/2026 ರಂದು ಬೆಳಗ್ಗೆ 11:00 ಗಂಟೆಗೆ, ಯಾದಗಿರಿ ವಲಯ ಕಚೇರಿಯಲ್ಲಿ ಆವರಣದಲ್ಲಿ ನಡೆಯಲಿದೆ. ವಾಹನಗಳನ್ನು ಹರಾಜಿನಲ್ಲಿ ಖರೀದಿಸಲು ಇಚ್ಛಿಸುವ ಸಾರ್ವಜನಿಕರು ಅಥವಾ ಬಿಡ್‌ದಾರರು, ನಿಗದಿತ ದಿನಾಂಕ ಮತ್ತು ಸಮಯಕ್ಕೆ ಸರಿಯಾಗಿ ಸ್ಥಳಕ್ಕೆ ಆಗಮಿಸಿ ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಹರಾಜಿಗೆ ಸಂಬಂಧಿಸಿದ ಹೆಚ್ಚಿನ ನಿಯಮಗಳು ಮತ್ತು ಷರತ್ತುಗಳನ್ನು ಕಚೇರಿಯ ವೇಳೆಯಲ್ಲಿ ಯಾದಗಿರಿ ವಲಯ ಕಚೇರಿಯಿಂದ ತಿಳಿದುಕೊಳ್ಳಬಹುದು.

ಸಹಿ/-

ಅಬಕಾರಿ ಉಪ ಆಯುಕ್ತರು

ಯಾದಗಿರಿ ಜಿಲ್ಲೆ: ಯಾದಗಿರಿ

ಸ್ಥಳ: ಯಾದಗಿರಿ

ದಿನಾಂಕ: 26/05/2026



KALABURAGI Edition

May 25, 2026 Page No. 11

Powered by: erelego.com

ಆರೋಪಿಗೆ ಇನ್ನೂ ಶಿಕ್ಷೆಯಾಗಿಲ್ಲ ಎಂದು ಈ ವಿಚಾರವಾಗಿ ಹೋರಾಟ ತರಬೇಕಾದರೆ ಜನರ ನೋವು ಕೇಳುವ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಪಟೇಲ್ ಕಾರ್ಯದರ್ಶಿ, ಯಾಳ್ವಿ ಮೇಟಿ ಮಾಡಿದರು.

# ಲಿಂಗರಾಜಪ್ಪ ಎಂಜಿನಿಯರಿಂಗ್ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸಮ್ಮೇಳನ ಯಶಸ್ವಿ



**ಬೀದರ, ಮೇ.23-**

ನಗರದ ಲಿಂಗರಾಜಪ್ಪ ಎಂಜಿನಿಯರಿಂಗ್ ಮಹಾವಿದ್ಯಾಲಯದಲ್ಲಿ ಇತ್ತೀಚಿನ ಇಂಜಿನಿಯರಿಂಗ್ ಮತ್ತು ನಿರ್ವಹಣಾ ಅಧ್ಯಯನಗಳ ಪ್ರಚಲಿತ ಪ್ರವೃತ್ತಿಗಳು ವಿಷಯದ ಕುರಿತು ದ್ವಿತೀಯ ರಾಷ್ಟ್ರೀಯ ಸಮ್ಮೇಳನ ಯಶಸ್ವಿಯಾಗಿ ನಡೆಯಿತು. ಮಾಹಿತಿ ತಂತ್ರಜ್ಞಾನ ಮತ್ತು ವಿದ್ಯುನ್ಮಾನ ಅಭಿಯಂತರರ ಸಂಸ್ಥೆಯ ವಿದ್ಯಾರ್ಥಿ ವೇದಿಕೆಯ ಸಹಯೋಗದಲ್ಲಿ ಆಯೋಜಿಸಲಾದ ಈ ಸಮ್ಮೇಳನದಲ್ಲಿ ವಿವಿಧ ತಾಂತ್ರಿಕ ಮತ್ತು ನಿರ್ವಹಣಾ ವಿಷಯಗಳ ಕುರಿತು ಚರ್ಚೆಗಳು ನಡೆದವು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಪೂಜ್ಯ ಡಾಕ್ಟರ್ ದಾಕ್ಷಾಯಣಿ ಎಸ್ ಅಪ್ಪ ಹಾಗೂ ಶರಣಬಸವೇಶ್ವರ ಸಂಸ್ಥಾನದ ಒಂಬತ್ತನೇ ಮಹಾದಾಸೋಹ ಪೀಠಾಧಿಪತಿಗಳಾದ ಪೂಜ್ಯ ದೊಡ್ಡಪ್ಪ ಅಪ್ಪ ಅವರ ಆಶೀರ್ವಾದದೊಂದಿಗೆ, ಮಹಾವಿದ್ಯಾಲಯದ ಕಾರ್ಯದರ್ಶಿ ಬಸವರಾಜ ದೇಶಮುಖ್ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಆಯೋಜಿಸಲಾಯಿತು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಶರಣಬಸವ ವಿಶ್ವವಿದ್ಯಾಲಯದ ನಿರ್ದೇಶಕರಾದ ಎ.ಡಿ.ಮೈತ್ರಿ ಅವರು ಮಾತನಾಡಿ, ತಂತ್ರಜ್ಞಾನ ಮತ್ತು ನಿರ್ವಹಣಾ ಅಧ್ಯಯನಗಳು ಪರಸ್ಪರ ಅವಲಂಬಿತವಾಗಿದ್ದು, ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ, ಅಂತರಜಾಲ ಆಧಾರಿತ ವ್ಯವಸ್ಥೆಗಳು, ದತ್ತಾಂಶ ವಿಶ್ಲೇಷಣೆ ಹಾಗೂ ಕ್ವಾಂಟಂ ಗಣಕಯಂತ್ರ ತಂತ್ರಜ್ಞಾನಗಳ ಕುರಿತು ವಿದ್ಯಾರ್ಥಿಗಳು ಆಳವಾದ ಅಧ್ಯಯನ ಮಾಡಬೇಕೆಂದು ತಿಳಿಸಿದರು.

ಆತ್ಮನಿರ್ಭರ ಭಾರತ ಹಾಗೂ ವಿಕಸಿತ ಭಾರತದ ಕನಸುಗಳನ್ನು ಸಾಕಾರಗೊಳಿಸುವಲ್ಲಿ ಯುವ ತಾಂತ್ರಿಕ ತಜ್ಞರ ಪಾತ್ರ ಮಹತ್ವದ್ದಾಗಿದೆ ಎಂದರು.

ಇನ್ನೋರ್ವ ಅತಿಥಿಯಾಗಿ ಭಾಗವಹಿಸಿದ್ದ ಶರಣಬಸವ ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವ ಎಸ್.ಎಚ್. ಹೊನ್ನಳ್ಳಿ ಅವರು ಕೃತಕ ಬುದ್ಧಿಮತ್ತೆಯ ಕುರಿತು ಮಾತನಾಡಿ, ಯಂತ್ರಗಳು ಮಾನವನ ಭಾವನಾತ್ಮಕ ಸಂಬಂಧ ಮತ್ತು ಸಮಗ್ರ ಕಾರ್ಯಕ್ಷಮತೆಯನ್ನು ಸಂಪೂರ್ಣವಾಗಿ ಬದಲಾಯಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟರು. ಸುಸ್ಥಿರ ಇಂಧನ, ಸುಸ್ಥಿರ ವ್ಯವಹಾರ ಅಭಿವೃದ್ಧಿ ಹಾಗೂ ಜಲ ನಿರ್ವಹಣೆ ಕ್ಷೇತ್ರಗಳಲ್ಲಿ ಹೆಚ್ಚಿನ ಸಂಶೋಧನೆ ಅಗತ್ಯವಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ನಿರ್ದೇಶಕಿ ಡಾ.ಉಮಾತಾಯಿ ದೇಶಮುಖ್ ಅವರು ಮಾತನಾಡಿ, ಇಂತಹ ಸಮ್ಮೇಳನಗಳು ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನ ವೃದ್ಧಿಗೆ ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಂಶುಪಾಲೆ ಡಾ. ವಿನಿತಾ ಪಾಟೀಲ ಅವರು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಅಂತಿಮ ವರ್ಷದ ವಿದ್ಯಾರ್ಥಿಗಳನ್ನು ಸಂಶೋಧನಾ ಪ್ರಬಂಧ ಮಂಡನೆಗೆ ಪ್ರೋತ್ಸಾಹಿಸುವುದು ಸಮ್ಮೇಳನದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು. ಸುಮಾರು ಎರಡು ನೂರಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳು ಸಲ್ಲಿಕೆಯಾಗಿದ್ದು, ಅವುಗಳಲ್ಲಿ ಆಯ್ಕೆಯಾದ ಎಂಬತ್ತು ಪ್ರಬಂಧಗಳನ್ನು ನೇರ ಹಾಗೂ ಅಂತರ್ಜಾಲದ ಮೂಲಕ ಮಂಡಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಪ್ರಮುಖ ಉಪನ್ಯಾಸಕರಾಗಿ ಆಗಮಿಸಿದ್ದ ಜಿ.ಎನ್.ಐ.ಟಿ ಮಹಾವಿದ್ಯಾಲಯದ ಶೈಕ್ಷಣಿಕ ವಿಭಾಗದ ಮುಖ್ಯಸ್ಥ ಡಾ. ಶತ್ರುಘ್ನ ಪ್ರಸಾದ್ ಯಾದವ್ ಅವರು ಆರನೇ ತಲೆಮಾರಿನ ಸಂಪರ್ಕ ಜಾಲಗಳಲ್ಲಿ ಮುಂದಿನ ಪೀಳಿಗೆಯ ಡಿಜಿಟಲ್ ದೃಶ್ಯ ಪ್ರಸಾರದ ಕುರಿತು ಉಪನ್ಯಾಸ ನೀಡಿದರು.

ಗುರುನಾನಕ್ ದೇವ್ ಎಂಜಿನಿಯರಿಂಗ್ ಮಹಾವಿದ್ಯಾಲಯದ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ವಿಭಾಗದ ಸಹ ಪ್ರಾಧ್ಯಾಪಕಿ ಡಾ. ಜಸ್ಮೀನ್ ಕೌರ್ ಅವರು ಕೃತಕ ಬುದ್ಧಿಮತ್ತೆ, ಅಂತರಜಾಲ ವ್ಯವಸ್ಥೆಗಳು ಮತ್ತು ಬುದ್ಧಿವಂತ ವ್ಯವಸ್ಥೆಗಳ ಕುರಿತು ಉಪನ್ಯಾಸ ನೀಡಿದರು.

ಸಮ್ಮೇಳನದ ಸಂಶೋಧನಾ ಪ್ರಬಂಧ ಸಂಕಲನವನ್ನು ವೇದಿಕೆಯ ಮೇಲಿನ ಗಣ್ಯರು ಬಿಡುಗಡೆ ಮಾಡಿದರು. ಕಾರ್ಯಕ್ರಮವನ್ನು ಡಾ. ಸಾಗರಕುಮಾರ ಬುಯ್ಯ ನಿರೂಪಿಸಿದರು. ಡಾ. ಬಸವಲಿಂಗಸ್ವಾಮಿ ಹಿರೇಮಠ ವಂದಿಸಿದರು.

ವಿವಿಧ ವಿಭಾಗಗಳ ಮುಖ್ಯಸ್ಥರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಟೆಕ್ನೋತ್ಸವ ಯುಕ್ತಿ ಸಮಾರೋಪದಲ್ಲಿ ಬಿಡವೆ ಹೇಳಿಕೆ

# ‘ಸ್ಪರ್ಧೆಯಲ್ಲಿ ಭಾಗವಹಿಸುವಿಕೆ ಮುಖ್ಯ’

ಪ್ರಜಾವಾಣಿ ವಾರ್ತೆ



ಬೀದರ್ ತಾಲ್ಲೂಕಿನ ಗೋರನಳ್ಳಿ ಸಮೀಪದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಈಚೆಗೆ ನಡೆದ ಟೆಕ್ನೋತ್ಸವ ಯುಕ್ತಿ ಸಮಾರೋಪ ಸಮಾರಂಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಟ್ರೋಫಿ ಪ್ರದಾನ ಮಾಡಲಾಯಿತು

ಗೋರನಳ್ಳಿ (ಜನವಾಡ): ಸೋಲು-ಗೆಲುವಿಗಿಂತ ಸ್ಪರ್ಧೆಯಲ್ಲಿ ಭಾಗವಹಿಸುವುದು ಬಹಳ ಮುಖ್ಯ ಎಂದು ಕಲಬುರಗಿಯ ಶರಣಬಸವೇಶ್ವರ ವಿಶ್ವವಿದ್ಯಾಲಯದ ಕುಲಪತಿ ಅನಿಲಕುಮಾರ ಬಿಡವೆ ಹೇಳಿದರು.

ಬೀದರ್ ತಾಲ್ಲೂಕಿನ ಗೋರನಳ್ಳಿ ಸಮೀಪದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಈಚೆಗೆ ನಡೆದ ಟೆಕ್ನೋತ್ಸವ ಯುಕ್ತಿ 2025 ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಸ್ಪರ್ಧೆಗಳು ವಿದ್ಯಾರ್ಥಿಗಳ ಪ್ರತಿಭೆ ಅನಾವರಣಕ್ಕೆ ವೇದಿಕೆ ಒದಗಿಸುತ್ತವೆ. ಸ್ಪರ್ಧಾ ಮನೋಭಾವ ಬೆಳೆಸುತ್ತವೆ ಎಂದು ತಿಳಿಸಿದರು.

ಪ್ರಸ್ತುತ ವಿದ್ಯಾರ್ಥಿಗಳು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ತಂತ್ರಜ್ಞಾನ ಅರಿಯಬೇಕು ಎಂದು ಹೇಳಿದರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ, ವಿದ್ಯಾರ್ಥಿಗಳು ಸಂಶೋಧನಾ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು ಎಂದು ಸಲಹೆ ಮಾಡಿದರು.

ಟೆಕ್ನೋತ್ಸವ ಯುಕ್ತಿ ನಿಮಿತ್ತ ಹಮ್ಮಿಕೊಂಡಿದ್ದ ಅಂತರ ಕಾಲೇಜು ಮಟ್ಟದ ವಿವಿಧ ಸ್ಪರ್ಧೆ ಹಾಗೂ ಚಟುವಟಿಕೆಗಳಲ್ಲಿ ಪ್ರಥಮ ಸ್ಥಾನ ಗಳಿಸಿದ ಶರಣಬಸವೇಶ್ವರ ವಿಶ್ವವಿದ್ಯಾಲಯ ಹಾಗೂ ದ್ವಿತೀಯ ಸ್ಥಾನ ಪಡೆದ ಗುರುನಾನಕ ದೇವ ಎಂಜಿನಿಯರಿಂಗ್ ಕಾಲೇಜಿಗೆ ಟ್ರೋಫಿ ಪ್ರದಾನ ಮಾಡಲಾಯಿತು.

2024-25ನೇ ಸಾಲಿನ ಕಾಲೇಜು ಚಟುವಟಿಕೆಗಳ ಪುಸ್ತಕ ಬಿಡುಗಡೆ ಮಾಡಲಾಯಿತು. ಕಾಲೇಜು ಪ್ರಾಚಾರ್ಯೆ ವಿನಿತಾ ಪಾಟೀಲ, ಶರಣಬಸವೇಶ್ವರ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಕಾಲೇಜು ಪ್ರಾಚಾರ್ಯ ಸತೀಶ ಪ್ರತಾಪುರೆ, ವಿವೇಕ ಜಲಾದೆ, ಗುರುರಾಜ ನಾಸೆ ಇದ್ದರು.

# ಲಿಂಗರಾಜ ಅಪ್ಪ ಕಾಲೇಜು: ರಾಷ್ಟ್ರೀಯ ವಿಚಾರ ಸಂಕಿರಣ

ಪ್ರಜಾವಾಣಿ ವಾರ್ತೆ

**ಗೋರನಳ್ಳಿ(ಜನವಾಡ):** ಬೀದರ್ ತಾಲ್ಲೂಕಿನ ಗೋರನಳ್ಳಿ ಸಮೀಪದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಇತ್ತೀಚಿಗೆ ಎಂಜಿನಿಯರಿಂಗ್ ಮತ್ತು ನಿರ್ವಹಣಾ ಅಧ್ಯಯನಗಳ ಪ್ರಚಲಿತ ಪ್ರವೃತ್ತಿಗಳ ಕುರಿತು ಎರಡನೇ ರಾಷ್ಟ್ರೀಯ ಸಮ್ಮೇಳನ ಶನಿವಾರ ನಡೆಯಿತು.

ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದ ವಿ.ಡಿ.ಮೈತ್ರಿ ಮಾತನಾಡಿ, 'ತಂತ್ರಜ್ಞಾನ ಹಾಗೂ ನಿರ್ವಹಣಾ ಅಧ್ಯಯನ ಒಂದಕ್ಕೊಂದು ಅವಲಂಬಿತವಾಗಿವೆ. ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ, ಎಂಎಲ್, ಐಒಟಿ, ಡೇಟಾ ಅನಾಲಿಟಿಕ್ಸ್, ಕ್ವಾಂಟಮ್ ಕಂಪ್ಯೂಟಿಂಗ್ ಕುರಿತು ಅಧ್ಯಯನ ನಡೆಸಬೇಕು' ಎಂದರು.



ಬೀದರ್ ತಾಲ್ಲೂಕಿನ ಗೋರನಳ್ಳಿ ಸಮೀಪದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ಸಮ್ಮೇಳನದಲ್ಲಿ ಸಂಶೋಧನಾ ಪ್ರಬಂಧಗಳ ಕೃತಿ ಬಿಡುಗಡೆ ಮಾಡಲಾಯಿತು

ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವ ಎಸ್.ಎಚ್. ಹೊನ್ನಳ್ಳಿ ಮಾತನಾಡಿ, 'ಸುಸ್ಥಿರ ಇಂಧನ ಅಭಿವೃದ್ಧಿ, ಸುಸ್ಥಿರ ವ್ಯವಹಾರ ಅಭಿವೃದ್ಧಿ, ಜನರ ನಿರ್ವಹಣೆ ಬಗ್ಗೆ ಹೆಚ್ಚು ಅಧ್ಯಯನಗಳು ಆಗಬೇಕಿದೆ' ಎಂದರು.

ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜು ನಿರ್ದೇಶಕಿ ಉಮಾ ದೇಶಮುಖ ಮಾತನಾಡಿ, 'ಸಮ್ಮೇಳನ ಹಲವು ತಾಂತ್ರಿಕ ಹಾಗೂ ನಿರ್ವಹಣಾ ಅಧ್ಯಯನಗಳಿಗೆ ಸಹಕಾರಿಯಾಗಲಿದೆ. ಕಾಲೇಜು ಇನ್ನೂ ಹೆಚ್ಚಿನ ಅಧ್ಯಯನಗಳಿಗೆ ಶ್ರಮಿಸಲಿದೆ' ಎಂದರು.

ಪ್ರಾಚಾರ್ಯೆ ವಿನಿತಾ ಪಾಟೀಲ, ಜಿಎನ್‌ಐಟಿ ಕಾಲೇಜಿನ ಡೀನ್ ಶತ್ರುಘ್ನ ಪ್ರಸಾದ್ ಯಾದವ್, ಗುರುನಾನಕ ದೇವ ಎಂಜಿನಿಯರಿಂಗ್ ಕಾಲೇಜಿನ ಸಹ ಪ್ರಾಧ್ಯಾಪಕ ಜಸ್ಮಿನೀತ್ ಕೌರ್ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಸಂಶೋಧನಾ ಪ್ರಬಂಧಗಳ ಪುಸ್ತಕ ಬಿಡುಗಡೆ ಮಾಡಲಾಯಿತು.

ಶರಣಬಸವೇಶ್ವರ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಸತೀಶ್ ಪ್ರತಾಪುರ ಇದ್ದರು. ಸಾಗರಕುಮಾರ ಬುಯ್ಯ ನಿರೂಪಿಸಿದರು. ಬಸವಲಿಂಗ ಸ್ವಾಮಿ ನಿರೂಪಿಸಿದರು.

Publication Date
24/05/2026

Presented by ಪ್ರಜಾವಾಣಿ

# ಲಿಂಗರಾಜ ಅಪ್ಪ ಕಾಲೇಜು: ಉದ್ಯೋಗ ಮೇಳ ನಾಳೆ

ಪ್ರಜಾವಾಣಿ ವಾರ್ತೆ

ಕಲಬುರಗಿ: ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಆಶ್ರಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೀದರ್‌ನ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜು ಮೇ 30ರಂದು ಕಾಲೇಜಿನ ಮುಖ್ಯ ಆವರಣದಲ್ಲಿ ಒಂದು ದಿನ ಉದ್ಯೋಗ ಮೇಳವನ್ನು ಆಯೋಜಿಸಿದೆ.

ಈ ಉದ್ಯೋಗ ಮೇಳವು ಕಲ್ಯಾಣ ಕರ್ನಾಟಕ ಪ್ರದೇಶದ, ವಿಶೇಷವಾಗಿ ಬೀದರ್ ಜಿಲ್ಲೆಯ ಅರ್ಹ ಆಕಾಂಕ್ಷಿಗಳಿಗೆ ಹೊಸ ಉದ್ಯೋಗಾವಕಾಶಗಳನ್ನು ತೆರೆಯುತ್ತದೆ ಎಂದು ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿ.ಇ. ಹಾಗೂ ಎಂ. ಟೆಕ್. ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಮತ್ತು ಸದ್ಯ ಓದುತ್ತಿರುವ ಅಭ್ಯರ್ಥಿಗಳು, ಎಂಸಿಎ, ಎಂಬಿಎ, ಬಿಸಿಎ,, ಬಿ.ಕಾಂ, ಬಿಎಸ್ಸಿ, ಬಿಬಿಎಂ, ಬಿಬಿಎ, ಮತ್ತು ಐಟಿಐ ಹಾಗೂ ವಿವಿಧ ಡಿಪ್ಲೊಮಾ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಮತ್ತು ಸದ್ಯ ಓದುತ್ತಿರುವ ವಿದ್ಯಾರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ ಎಂದು ತಿಳಿಸಿದ್ದಾರೆ.

ಸುಮಾರು 40ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಮೇಳದಲ್ಲಿ ಭಾಗವಹಿಸಲಿವೆ ಎಂದು ಕಾಲೇಜಿನ ಪ್ರಾಂಶುಪಾಲೆ ವಿನಿತಾ ಪಾಟೀಲ ತಿಳಿಸಿದ್ದಾರೆ. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಳ್ಳಬಹುದು ಅಥವಾ 30ರಂದು ಕಾಲೇಜಿನ ಆವರಣದ ಸ್ಥಳದಲ್ಲಿಯೇ ತಮ್ಮ ಹೆಸರುಗಳನ್ನು ನೋಂದಾಯಿಸಬಹುದು. ಹೆಚ್ಚಿನ ವಿವರಗಳಿಗೆ ವಿನಿತಾ ಪಾಟೀಲ್ ಅವರ ಮೊ.ಸಂ. 8792506036 ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.



ಬೀದರ್ ತಾಲ್ಲೂಕಿನ ಗೋರನಳ್ಳಿ ಸಮೀಪದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮದಲ್ಲಿ ಪೋಸ್ಟರ್ ಪ್ರಸೆಂಟೇಷನ್ ಸ್ಪರ್ಧೆಯ ವಿಜೇತ ವಿದ್ಯಾರ್ಥಿಗಳಿಗೆ ಪ್ರಾಚಾರ್ಯೆ ವಿನಿತಾ ಪಾಟೀಲ ಬಹುಮಾನ ವಿತರಿಸಿದರು. ಪ್ರಶಾಂತ ಸಂಗೋಳಗಿ, ಮಹೇಶ ಗಣಕರ್, ಸಂಗಮೇಶ ಎಸ್., ಬಸವಲಿಂಗ ಸ್ವಾಮಿ ಇದ್ದರು

# ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಬೃಹತ್ ಉದ್ಯೋಗ ಮೇಳ: 327 ವಿದ್ಯಾರ್ಥಿಗಳಿಗೆ ಉದ್ಯೋಗದ ಸುವರ್ಣಾವಕಾಶ

# 43ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳ ಭಾಗಿ; ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳಿಂದ ಸಂದರ್ಶನ

**ಪ್ರಜಾ ಪ್ರಸಿದ್ಧ ವಾರ್ತೆ**

**ಬೀದರ್, ಮೇ 31:**

ನಗರದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜಿಸಲಾದ ಬೃಹತ್ ಉದ್ಯೋಗ ಮೇಳ2026 ಅಭೂತಪೂರ್ವ ಯಶಸ್ಸು ಕಂಡಿದ್ದು, ವಿವಿಧ ಕ್ಷೇತ್ರಗಳ 43ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಭಾಗವಹಿಸುವ ಮೂಲಕ ನೂರಾರು ಯುವಕರಿಗೆ ಉದ್ಯೋಗದ ಹೊಸ ಭರವಸೆ ಮೂಡಿಸಿವೆ.



ಮಾತೋಶ್ರೀ ಡಾ. ದಾಕ್ಷಾಯಣಿ ಎಸ್. ಅಪ್ಪ, ಅಧ್ಯಕ್ಷರು, ಶರಣಬಸವೇಶ್ವರ ವಿದ್ಯಾವರ್ಧಕ ಸಂಘ, ಕಲಬುರಗಿ ಹಾಗೂ ಪೂಜ್ಯ ದೊಡ್ಡಪ್ಪ ಅಪ್ಪ, ಒಂಬತ್ತನೇ ಮಹಾದಾಸೋಹ ಪೀಠಾಧಿಪತಿಗಳು, ಶರಣಬಸವೇಶ್ವರ ಸಂಸ್ಥಾನ, ಕಲಬುರಗಿ ಅವರ ಆಶೀರ್ವಾದದೊಂದಿಗೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಬಸವರಾಜ ಎಸ್. ದೇಶಮುಖ್ ಮಾತನಾಡಿ, ಉದ್ಯೋಗ ಮೇಳಗಳು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಮಹತ್ವದ ವೇದಿಕೆಗಳಾಗಿದ್ದು, ಯುವಕರು ಇಂತಹ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ, ಬೆಲ್ದಾಳೆ ಅವರು ವಿಡಿಯೋ ಸಂದೇಶದ ಮೂಲಕ ಶುಭ ಹಾರೈಸಿದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಗೀತಾ ಡಾ. ಶೈಲೇಂದ್ರ, ಬೆಲ್ದಾಳೆ ಮಾತನಾಡಿ, ಯುವಜನರು ತಮ್ಮ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳುವ ಮೂಲಕ ಉದ್ಯೋಗ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಬೇಕು ಎಂದು ತಿಳಿಸಿದರು. ಇಂತಹ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಿರುವ ಕಾಲೇಜಿನ ಕಾರ್ಯವನ್ನು ಶ್ಲಾಘಿಸಿದರು.

ಮುಖ್ಯ ಅತಿಥಿಗಳಾದ ಸೋಮಶೇಖರ್ ಬಿರಾದಾರ್ ಹಾಗೂ ಶ್ರೀಕಾಂತ್ ಅವರು ವಿದ್ಯಾರ್ಥಿಗಳು ಉದ್ಯೋಗ ಮೇಳಗಳ ಸದುಪಯೋಗ ಪಡೆದು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಗೌರವ ಅತಿಥಿಯಾಗಿ ಭಾಗವಹಿಸಿದ್ದ ಡಾ. ಸತೀಶ್ ಪ್ರತಾಪುರ್ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಉದ್ಯೋಗ ಮೇಳದಲ್ಲಿ ಐಟಿ, ಕೋರ್, ಬಿಪಿಒ, ಬ್ಯಾಂಕಿಂಗ್, ವಿಮಾ, ಉತ್ಪಾದನಾ ಹಾಗೂ ಎಲೆಕ್ಟ್ರಾನಿಕ್ಸ್ ಕ್ಷೇತ್ರಗಳ ಪ್ರತಿಷ್ಠಿತ ಕಂಪನಿಗಳಾದ ಇನ್ಫೋಸಿಸ್, ಟೆಕ್ ಮಹೀಂದ್ರಾ, ಎಂಫಾಸಿಸ್, ಕಾಂಸೆಂಟ್ರಿಕ್ಸ್, ಎಥರ್ ಎನರ್ಜಿ, ಬಜಾಜ್ ಅಲಿಯಾನ್ಸ್, ಎನ್‌ಐಐಟಿ, ಪಾರ್ಕ್ ಕಂಟ್ರೋಲ್ಸ್, ಕ್ಯಾಡ್‌ಮ್ಯಾಕ್ಸ್ ಸೊಲ್ಯೂಷನ್ಸ್, ಎಜುಟೆಕ್, ಎನ್‌ಟಿಟಿಎಫ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಸ್ಕಲೋ, ವಿಜಯ್ ಎಲೆಕ್ಟ್ರಿಕ್ ಸೇರಿದಂತೆ ಹಲವು ಕಂಪನಿಗಳು ಭಾಗವಹಿಸಿದ್ದವು.

ಸುಮಾರು 1000ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿವಿಧ ಕಂಪನಿಗಳ ಸಂದರ್ಶನದಲ್ಲಿ ಭಾಗವಹಿಸಿದ್ದು, ಅವರಲ್ಲಿ 327 ಅಭ್ಯರ್ಥಿಗಳಿಗೆ ಉದ್ಯೋಗ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು. ಇದು ಉದ್ಯೋಗ ಮೇಳದ ಪ್ರಮುಖ ಸಾಧನೆಯಾಗಿ ಗಮನ ಸೆಳೆಯಿತು.

ಕಾರ್ಯಕ್ರಮದ ಸಂಯೋಜಕರಾದ ಪ್ರಾಚಾರ್ಯೆ ಡಾ. ವಿನಿತಾ ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಮೇಳ ಆಯೋಜಿಸಲಾಗಿದೆ ಎಂದು ತಿಳಿಸಿದರು. ಸಹ-ಸಂಯೋಜಕರಾದ ವಿವೇಕಾನಂದ ಬಿರಾದಾರ್ ಮೇಳದ ಯಶಸ್ಸಿಗೆ ಶ್ರಮಿಸಿದರು. ಪ್ರಾಧ್ಯಾಪಕಿ ಸಹನಾ ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು. ಉದ್ಯೋಗ ಮೇಳದಲ್ಲಿ ಕಾಲೇಜಿನ ಅಧ್ಯಾಪಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಯುವಕರಿಗೆ ಉದ್ಯೋಗದ ಅವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಈ ಮೇಳವು ಮಹತ್ವದ ಹೆಜ್ಜೆಯಾಗಿ ಮೂಡಿಬಂದಿತು.

## ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜ್‌ನಲ್ಲಿ ಬೃಹತ್ ಉದ್ಯೋಗ ಮೇಳಕ್ಕೆ ಅಭೂತಪೂರ್ವ ಸ್ಪಂದನೆ

# 327 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ



ಬೀದರ್‌ನ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ "ಬೃಹತ್ ಉದ್ಯೋಗ ಮೇಳ" ಉದ್ಘಾಟಿಸಲಾಯಿತು.

ಸಂ.ಕ.ಸಮಾಚಾರ ಬೀದರ್: ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸುವ ಉದ್ದೇಶದಿಂದ ನಗರದ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ಶನಿವಾರ ಆಯೋಜಿಸಲಾದ "ಬೃಹತ್ ಉದ್ಯೋಗ ಮೇಳ" ಕ್ಕೆ ಅಭೂತಪೂರ್ವ ಸ್ಪಂದನೆ ವ್ಯಕ್ತವಾಯಿತು.

ವಿವಿಧ ಕಾಲೇಜುಗಳ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದ ಈ ಮೇಳದಲ್ಲಿ 45ಕ್ಕೂ ಅಧಿಕ ಪ್ರತಿಷ್ಠಿತ ಕಂಪನಿಗಳು ನೇಮಕಾತಿ ಪ್ರಕ್ರಿಯೆ ನಡೆಸಿ, 327 ಅಭ್ಯರ್ಥಿಗಳಿಗೆ ಉದ್ಯೋಗ ನೇಮಕಾತಿ ಪತ್ರ ವಿತರಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಸಂಘದ ಕಾರ್ಯದರ್ಶಿ ಬಸವರಾಜ ಎಸ್. ದೇಶಮುಖ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪದವಿಯ ಜೊತೆಗೆ ಕೌಶಲ್ಯವೂ ಅತ್ಯಂತ ಮಹತ್ವದ್ದಾಗಿದೆ. ವಿದ್ಯಾರ್ಥಿಗಳು ಇಂತಹ ಉದ್ಯೋಗ ಮೇಳಗಳ ಮೂಲಕ ಕೈಗಾರಿಕೆಗಳ ಅವಶ್ಯಕತೆಗಳನ್ನು ಅರಿತು ತಮ್ಮ ವೃತ್ತಿಜೀವನವನ್ನು ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ವಿಡಿಯೋ ಸಂದೇಶದ ಮೂಲಕ ಎಲ್ಲಾ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದರು.

ಉದ್ಘಾಟಿಸಿದ ಗೀತಾ ಶೈಲೇಂದ್ರ ಬೆಲ್ದಾಳೆ, ಇಂದಿನ ಯುವಜನತೆ ತಾಂತ್ರಿಕ ಜ್ಞಾನ, ಸಂವಹನ ಕೌಶಲ್ಯ ಮತ್ತು ವೃತ್ತಿಪರ ಸಾಮರ್ಥ್ಯಗಳನ್ನು ವೃದ್ಧಿಸಿಕೊಳ್ಳುವ ಮೂಲಕ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ಸಿದ್ಧರಾಗಬೇಕು ಎಂದು ಹೇಳಿದರು.

ಸೋಮಶೇಖರ್ ಬಿರಾದಾರ್ ಹಾಗೂ ಶ್ರೀಕಾಂತ್ ಅವರು ವಿದ್ಯಾರ್ಥಿಗಳಿಗೆ ಉದ್ಯೋಗ ಕ್ಷೇತ್ರದಲ್ಲಿನ ಅವಕಾಶಗಳು ಮತ್ತು ಸವಾಲುಗಳ ಕುರಿತು ಮಾಹಿತಿ ನೀಡಿದರು. ಡಾ.ಸತೀಶ್ ಪ್ರತಾಪುರ್ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ನೀಡಿ, ತಮ್ಮ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳುವಂತೆ ಕರೆ ನೀಡಿದರು. ಮೇಳದಲ್ಲಿ ಸುಮಾರು 1,000ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಾಯಿಸಿಕೊಂಡು ವಿವಿಧ ಹಂತಗಳ ಸಂದರ್ಶನ ಹಾಗೂ ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು. ಅಂತಿಮವಾಗಿ 327 ವಿದ್ಯಾರ್ಥಿಗಳಿಗೆ ಉದ್ಯೋಗ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು. ವಿದ್ಯಾರ್ಥಿಗಳು ಮತ್ತು ಉದ್ಯೋಗಾಕಾಂಕ್ಷಿಗಳಿಗೆ ನೇರವಾಗಿ ಉದ್ಯೋಗಾವಕಾಶ ಕಲ್ಪಿಸುವ ಮೂಲಕ ಈ ಮೇಳವು ಬೀದರ ಜಿಲ್ಲೆಯ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮಾದರಿ ಕಾರ್ಯಕ್ರಮವಾಗಿ ಗುರುತಿಸಿಕೊಂಡಿತು.

ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯೆ ಡಾ. ವಿನಿತಾ ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಯೋಜಕ ವಿವೇಕಾನಂದ ಬಿರಾದಾರ್ ಇದ್ದರು.ಪ್ರಾಧ್ಯಾಪಕಿ ಸಹನಾ ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು.

### ಮೇಳದಲ್ಲಿ ಭಾಗಿಯಾದ ಕಂಪನಿಗಳು

ಉದ್ಯೋಗ ಮೇಳದಲ್ಲಿ ಮಾಹಿತಿ ತಂತ್ರಜ್ಞಾನ, ಕೋರ್ ಇಂಜಿನಿಯರಿಂಗ್, ಬಿಪಿಒ, ಬ್ಯಾಂಕಿಂಗ್, ವಿಮಾ, ಉತ್ಪಾದನಾ ಹಾಗೂ ಎಲೆಕ್ಟ್ರಾನಿಕ್ಸ್ ಕ್ಷೇತ್ರಗಳ ಪ್ರಮುಖ ಕಂಪನಿಗಳಾದ ಇನ್ಫೋಸಿಸ್, ಟೆಕ್ ಮಹೀಂದ್ರಾ, ಎಂಫಾಸಿಸ್, ಕಾಂಸೆಂಟ್ರಿಕ್ಸ್, ಎಥರ್ ಎನರ್ಜಿ, ಬಜಾಜ್ ಅಲಿಯಾನ್ಸ್, ಎನ್‌ಐಐಟಿ, ಪಾರ್ಕ್ ಕಂಟ್ರೋಲ್ಸ್, ಕ್ಯಾಡ್‌ಮ್ಯಾಕ್ಸ್ ಸೊಲ್ಯೂಷನ್ಸ್, ಎಐಟೆಕ್, ಎನ್‌ಟಿಟಿಎಫ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಸ್ಕೈಲೋ, ವಿಜಯ್ ಎಲೆಕ್ಟ್ರಿಕ್ ಸೇರಿ ದೇಶದ ಹಲವು ಪ್ರತಿಷ್ಠಿತ ಸಂಸ್ಥೆಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿದ್ದವು.

### ಉದ್ಯೋಗ ಮೇಳಕ್ಕೆ ಮೆಚ್ಚುಗೆ





ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿವಿ ಕುಲಾಧಿಪತಿ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಣಿ ಅವ್ವಾಜಿ ಹಾಗೂ ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು ಉದ್ಯೋಗ ಮೇಳದ ನೇಮಕಾತಿಯಲ್ಲಿ ಆಯ್ಕೆಯಾದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದಿಸಿ ಆಶೀರ್ವಾದಿಸಿದ್ದಾರೆ. ಉದ್ಯೋಗ ಮೇಳವನ್ನು ಯಶಸ್ವಿಯಾಗಿಸಿದಕ್ಕೆ ಕಾಲೇಜಿನ ಪ್ರಾಚಾರ್ಯರಿಗೆ ಹಾಗೂ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಸಹಕರಿಸಿದ ಎಲ್ಲಾ ಸಿಬ್ಬಂದಿ ವರ್ಗದವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಸಂಜೆವಾಣಿ
Sanjevani / 2026-05-31, 8, Vijaypura

# ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನ ಬೃಹತ್ ಉದ್ಯೋಗ ಮೇಳದಲ್ಲಿ ಸುಮಾರು 45 ಪ್ರತಿಷ್ಠಿತ ಕಂಪನಿಗಳಿಂದ ನೇಮಕಾತಿ, 327 ವಿದ್ಯಾರ್ಥಿಗಳಿಗೆ ಉದ್ಯೋಗ ಪತ್ರ ವಿತರಣೆ








ಬೀದರ್:ಮೇ.31:ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳನ್ನುಕಲ್ಪಿಸುವ ಉದ್ದೇಶದಿಂದನಗರದಲಿಂಗರಾಜ ಅಪ್ಪಇಂಜಿನಿಯರಿಂಗ್ ಕಾಲೇಜಿನಲ್ಲಿ ಶನಿವಾರಆಯೋಜಿಸಲಾದ"ಬೃಹತ್ ಉದ್ಯೋಗ ಮೇಳ–2026" ಕ್ಕೆ ಅಭೂತಪೂರ್ವ ಸ್ಪಂದನೆ ವ್ಯಕ್ತವಾಯಿತು. ವಿವಿಧ ಕಾಲೇಜುಗಳ ಸಾವಿರಕ್ಕೂಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದ ಈ ಮೇಳದಲ್ಲಿ 45ಕ್ಕೂಅಧಿಕ ಪ್ರತಿಷ್ಠಿತ ಕಂಪನಿಗಳು ನೇಮಕಾತಿ ಪ್ರಕ್ರಿಯೆ ನಡೆಸಿ, 327 ಅಭ್ಯರ್ಥಿಗಳಿಗೆಉದ್ಯೋಗನೇಮಕಾತಿ ಪತ್ರಗಳನ್ನು ವಿತರಿಸಿದವು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಣಿ ಅವ್ವಾಜಿ ಹಾಗೂ ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪ ಅವರ ಆಶೀರ್ವಾದದೊಂದಿಗೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಉದ್ಯೋಗ ಮೇಳದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ಎಸ್. ದೇಶಮುಖ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪದವಿಯ ಜೊತೆಗೆ ಕೌಶಲ್ಯವೂ ಅತ್ಯಂತ ಮಹತ್ವದ್ದಾಗಿದೆ. ವಿದ್ಯಾರ್ಥಿಗಳು ಇಂತಹ ಉದ್ಯೋಗ ಮೇಳಗಳ ಮೂಲಕ ಕೈಗಾರಿಕೆಗಳ ಅವಶ್ಯಕತೆಗಳನ್ನು ಅರಿತು ತಮ್ಮ ವೃತ್ತಿಜೀವನವನ್ನುರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಬೀದರ್ ಜಿಲ್ಲೆಯ ದಕ್ಷಿಣ ಮತಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ವಿಡಿಯೋ ಸಂದೇಶದ ಮೂಲಕ ಎಲ್ಲಾ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಶ್ರೀಮತಿ ನೀತಾ ಶೈಲೇಂದ್ರ ಬೆಲ್ದಾಳೆ ಮಾತನಾಡಿ, ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ಇಂತಹ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಿರುವ ಕಾಲೇಜಿನ ಕಾರ್ಯವನ್ನು ಅವರು ಶ್ಲಾಘಿಸಿ, ಇಂದಿನ ಯುವಜನತೆ ತಾಂತ್ರಿಕ ಜ್ಞಾನ, ಸಂವಹನ ಕೌಶಲ್ಯ ಮತ್ತು ವೃತ್ತಿಪರ ಸಾಮರ್ಥ್ಯಗಳನ್ನು ವೃದ್ಧಿಸಿಕೊಳ್ಳುವ ಮೂಲಕ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ಸಿದ್ಧರಾಗಬೇಕು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶ್ರೀ ಸೋಮಶೇಖರ್ ಬಿರಾದಾರ್ ಹಾಗೂ ಶ್ರೀ ಶ್ರೀಕಾಂತ್ ಅವರು ವಿದ್ಯಾರ್ಥಿಗಳಿಗೆ ಉದ್ಯೋಗ ಕ್ಷೇತ್ರದಲ್ಲಿನ ಅವಕಾಶಗಳು ಮತ್ತು ಸವಾಲುಗಳ ಕುರಿತು ಮಾಹಿತಿ ನೀಡಿದರು. ಗೌರವ ಅತಿಥಿಯಾಗಿ ಪಾಲ್ಗೊಂಡಿದ್ದ ಡಾ. ಸತೀಶ್ ಪ್ರತಾಪುರ್ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ನೀಡಿ, ತಮ್ಮ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳುವಂತೆ ಕರೆ ನೀಡಿದರು.

ಉದ್ಯೋಗ ಮೇಳದಲ್ಲಿ ಮಾಹಿತಿ ತಂತ್ರಜ್ಞಾನ, ಕೋರ್ ಇಂಜಿನಿಯರಿಂಗ್, ಬಿಪಿಒ, ಬ್ಯಾಂಕಿಂಗ್, ವಿಮಾ, ಉತ್ಪಾದನಾ ಹಾಗೂ ಎಲೆಕ್ಟ್ರಾನಿಕ್ಸ್ ಕ್ಷೇತ್ರಗಳ ಪ್ರಮುಖ ಕಂಪನಿಗಳಾದ ಇನ್ಫೋಸಿಸ್, ಟೆಕ್ ಮಹೀಂದ್ರಾ, ಎಂಫಾಸಿಸ್, ಕಾಂಸೆಂಟ್ರಿಕ್ಸ್, ಎಥರ್ ಎನರ್ಜಿ, ಬಜಾಜ್ ಅಲಿಯಾನ್ಸ್, ಎನ್ಐಐಟಿ, ಪಾರ್ಕ್ ಕಂಟ್ರೋಲ್ಸ್, ಕ್ಯಾಡ್‌ಮ್ಯಾಕ್ಸ್ ಸೊಲ್ಯೂಷನ್ಸ್, ಎಜುಟೆಕ್, ಎನ್‌ಟಿಟಿಎಫ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಸ್ಕೈಲೋ, ವಿಜಯ್ ಎಲೆಕ್ಟ್ರಿಕ್ ಸೇರಿದಂತೆ ದೇಶದ ಹಲವು ಪ್ರತಿಷ್ಠಿತ ಸಂಸ್ಥೆಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿದ್ದವು.

ಮೇಳದಲ್ಲಿ ಸುಮಾರು 1,000ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಾಯಿಸಿಕೊಂಡು ವಿವಿಧ ಹಂತಗಳ ಸಂದರ್ಶನ ಹಾಗೂ ಆಯ್ಕೆಪ್ರಕ್ರಿಯೆಯಲ್ಲಿ ಪಾಲ್ಗೊಂಡರು. ಕಂಪನಿಗಳ ಮಾನವ ಸಂಪನ್ಮೂಲ ವಿಭಾಗದ ಅಧಿಕಾರಿಗಳು ಅಭ್ಯರ್ಥಿಗಳ ಕೌಶಲ್ಯ, ತಾಂತ್ರಿಕ ಜ್ಞಾನ ಹಾಗೂ ಸಂವಹನ ಸಾಮರ್ಥ್ಯವನ್ನು ಮೌಲ್ಯಮಾಪನ ಮಾಡಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆಮಾಡಿದರು. ಅಂತಿಮವಾಗಿ 327 ವಿದ್ಯಾರ್ಥಿಗಳಿಗೆ ಉದ್ಯೋಗ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಣಿ ಅವ್ವಾಜಿ ಹಾಗೂ ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು ಬೀದರ್‌ನ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ಉದ್ಯೋಗ ಮೇಳದ ನೇಮಕಾತಿಯಲ್ಲಿ ಆಯ್ಕೆಯಾದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದಿಸಿ ಆಶೀರ್ವಾದಿಸಿದ್ದಾರೆ. ಉದ್ಯೋಗ ಮೇಳವನ್ನು ಯಶಸ್ವಿಯಾಗಿಸಿದಕ್ಕೆ ಕಾಲೇಜಿನ ಪ್ರಾಚಾರ್ಯರಿಗೆ ಹಾಗೂ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಸಹಕರಿಸಿದ ಎಲ್ಲಾ ಸಿಬ್ಬಂದಿ ವರ್ಗದವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.10

ಕಾರ್ಯಕ್ರಮದ ಸಂಯೋಜಕರು ಹಾಗೂ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯೆ ಡಾ. ವಿನಿತಾ ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಉದ್ಯೋಗದ ಭದ್ರ ಭವಿಷ್ಯ ಕಲ್ಪಿಸುವ ಉದ್ದೇಶದಿಂದ ಈ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು. ಸಹ–ಸಂಯೋಜಕ ಶ್ರೀ ವಿವೇಕಾನಂದ ಬಿರಾದಾರ್ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು. ಪ್ರಾಧ್ಯಾಪಕಿ ಸಹನಾ ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು.

ಉದ್ಯೋಗ ಮೇಳದಲ್ಲಿ ಕಾಲೇಜಿನ ಅಧ್ಯಾಪಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ವಿದ್ಯಾರ್ಥಿಗಳು ಮತ್ತು ಉದ್ಯೋಗಾಕಾಂಕ್ಷಿಗಳಿಗೆ ನೇರವಾಗಿ ಉದ್ಯೋಗಾವಕಾಶ ಕಲ್ಪಿಸುವ ಮೂಲಕ ಈ ಮೇಳವು ಬೀದರ ಜಿಲ್ಲೆಯ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮಾದರಿ ಕಾರ್ಯಕ್ರಮವಾಗಿ ಗುರುತಿಸಿಕೊಂಡಿತು.

Reg No : KNKAN/25/A2919

ಸುದ್ದಿ ಜಗತ್ತು ನ್ಯೂಸ್
ಕನ್ನಡ ದಿನ ಪತ್ರಿಕೆ

SUDDI JAGATU NEWS
KANNADA DAILY NEWS PAPER

ಸಂಪಾದಕರು : ಸಂಗಮೇಶ ಎಸ್. ಮೂಲಗೆ
EDITOR : SANGAMESH S. MULGE

Cell : +91 9164442557 / 9242058666
Email : suddijagattunews@gmail.com

## ಬೀದರನ ಲಿಂಗರಾಜ ಅಪ್ಪಾ ಇಂಜಿನಿಯರಿಂಗ್ ಕಾಲೇಜಿನಲ್ಲಿ

# ಮೇ 30ರಂದು ಉದ್ಯೋಗ ಮೇಳ

ಬೀದರ್: ಮೇ.28: ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಆಶ್ರಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೀದರನ ಲಿಂಗರಾಜ ಅಪ್ಪಾ ಇಂಜಿನಿಯರಿಂಗ್ ಕಾಲೇಜು ಮೇ 30ರ ಶನಿವಾರದಂದು ಕಾಲೇಜಿನ ಮುಖ್ಯ ಆವರಣದಲ್ಲಿ ಒಂದು ದಿನವಿಡೀ ಉದ್ಯೋಗ ಮೇಳವನ್ನು ಆಯೋಜಿಸಲಿದ್ದು, ಉದ್ಯೋಗಾಕಾಂಕ್ಷಿಗಳು ಉನ್ನತ ನೇಮಕಾತಿದಾರರೊಂದಿಗೆ ಮುಖಾಮುಖಿಯಾಗಿ ಭೇಟಿಯಾಗುವುದು, ವಿಭಿನ್ನ ವೃತ್ತಿ ಅವಕಾಶಗಳನ್ನು ಅನ್ವೇಷಿಸುವುದು ಮತ್ತು ಸರಿಯಾದ ರೀತಿಯ ಉದ್ಯೋಗಾವಕಾಶಗಳನ್ನು ಆಯ್ಕೆ ಮಾಡಲು ವಿವಿಧ ಕಂಪನಿಗಳ ಮಾನವ ಸಂಪನ್ಮೂಲ ವೃತ್ತಿಪರರೊಂದಿಗೆ ಸಂವಹನ ನಡೆಸುವುದು ಈ ಉದ್ಯೋಗ ಮೇಳದ ಪ್ರಮುಖ ಲಕ್ಷ್ಯವಾಗಿದೆ.

ಈ ಉದ್ಯೋಗ ಮೇಳವು ಕಲ್ಯಾಣ ಕರ್ನಾಟಕ ಪ್ರದೇಶದ, ವಿಶೇಷವಾಗಿ ಬೀದರ್ ಜಿಲ್ಲೆಯ ಅರ್ಹ ಆಕಾಂಕ್ಷಿಗಳಿಗೆ ಹೊಸ ಉದ್ಯೋಗಾವಕಾಶಗಳನ್ನು ತೆರೆಯುತ್ತದೆ ಎಂದು ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬಿ.ಇ. ಹಾಗೂ ಎಮ್. ಟೆಕ್. ಕೋರ್ಸ್‌ಗಳನ್ನು ಪೂರ್ಣಗೊಳಿಸಿದ



ಮತ್ತು ಅನುಸರಿಸುತ್ತಿರುವ ಅಭ್ಯರ್ಥಿಗಳು, ಮಾಸ್ಟರ್ ಆಫ್ ಕಂಪ್ಯೂಟರ್ ಅಪ್ಲಿಕೇಶನ್ (ಒಆಂ), ಮಾಸ್ಟರ್ ಆಫ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ (?ಃಂ), ಬ್ಯಾಚುಲರ್ ಆಫ್ ಕಂಪ್ಯೂಟರ್ ಅಪ್ಲಿಕೇಶನ್ (ಃಆಂ), ಬಿ.ಕಾಂ, ಬಿಎಸ್ಸಿ, ಬ್ಯಾಚುಲರ್ ಆಫ್ ಬಿಸಿನೆಸ್ ಮ್ಯಾನೇಜ್‌ಮೆಂಟ್ (ಃಃಒ), ಬ್ಯಾಚುಲರ್ ಆಫ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ (ಃಃಂ), ಮತ್ತು ಐಟಿಐ ಹಾಗೂ ವಿವಿಧ ಡಿಪ್ಲೊಮಾ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಮತ್ತು ಅನುಸರಿಸುತ್ತಿರುವ ವಿದ್ಯಾರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ ಎಂದು ತಿಳಿಸಿದ್ದಾರೆ.

ಸುಮಾರು 40ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಉದ್ಯೋಗ ಮೇಳದಲ್ಲಿ ತಮ್ಮ ಭಾಗವಹಿಸುವಿಕೆಯನ್ನು ದೃಢೀಕರಿಸಿವೆ ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ವಿನಿತಾ ಪಾಟೀಲ್ ತಿಳಿಸಿರುವರು. ಅವುಗಳಲ್ಲಿ ಪ್ರಮುಖವಾದವುಗಳಾದ ಇನ್ಫೋಸಿಸ್, ಟೆಕ್ ಮಹೀಂದ್ರಾ, ಸದರ್ಲ್ಯಾಂಡ್, ಕ್ಯಾಮ್ಯಾಕ್ಸ್ ಸಲ್ಯೂಷನ್ಸ್, ಟಫೆ, ಹುಂಡೈ, 24ಫ7 ಎಐ, ಮತ್ತು ಇತರ ಸಾಫ್ಟ್‌ವೇರ್ ಮತ್ತು ಹಾರ್ಡ್‌ವೇರ್ ಪ್ರಮುಖ ಕಂಪನಿಗಳು ಸೇರಿವೆ. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಆನ್‌ಲೈನಲ್ಲಿ ನೋಂದಾಯಿಸಿಕೊಳ್ಳಬಹುದು ಅಥವಾ 30ರಂದು ಕಾಲೇಜಿನ ಆವರಣದ ಸ್ಥಳದಲ್ಲಿಯೇ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ ಡಾ. ವಿನಿತಾ ಪಾಟೀಲ್ ಅವರ ಮೊಬೈಲ್ ಸಂಖ್ಯೆ 8792506036 ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯ'ದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಹಾಗೂ ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿಗಳಾದ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಅವರು ಲಿಂಗರಾಜ ಅಪ್ಪಾ ಇಂಜಿನಿಯರಿಂಗ್ ಕಾಲೇಜಿನ ತಂಡಕ್ಕೆ ಈ ಉದ್ಯೋಗ ಮೇಳ ಆಯೋಜಿಸಿದ್ದುದಕ್ಕೆ ಆಶೀರ್ವದಿಸಿ ಅಭಿನಂದನೆ ಸಲ್ಲಿಸಿದ್ದಾರೆ.

ಉದಯಕಾಲ

## ಪ್ರತಿಷ್ಠಿತ ಕಂಪನಿಗಳು ಭಾಗಿ | ಸದುಪಯೋಗ ಪಡೆದುಕೊಂಡ ನೂರಾರು ವಿದ್ಯಾರ್ಥಿಗಳು

# ಬೃಹತ್ ಉದ್ಯೋಗ ಮೇಳ-2026 ಯಶಸ್ವಿ

**ಉದಯಕಾಲ ನ್ಯೂಸ್**

**ಬೀದರ್:** ನಗರದ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಬೃಹತ್ ಉದ್ಯೋಗ ಮೇಳ-2026 ಯಶಸ್ವಿಯಾಯಿತು. ವಿವಿಧ ಕ್ಷೇತ್ರಗಳ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಿದ್ದು, ನೂರಾರು ಉದ್ಯೋಗಾಕಾಂಕ್ಷಿ ಯುವಕರು ಉತ್ಸಾಹದಿಂದ ಪಾಲ್ಗೊಂಡು ಸದುಪಯೋಗ ಪಡೆದುಕೊಂಡರು.



ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ಉದ್ಯೋಗ ಮೇಳ

ಕಾರ್ಯಕ್ರಮದ ಅಧ್ಯಕ್ಷತೆ ವ ಬಸವರಾಜ ಎಸ್. ದೇಶಮುಖ್ ವಹಿಸಿಕೊಂಡು ಮಾತನಾಡಿದ ಅವರು ಉದ್ಯೋಗ ಮೇಳದಲ್ಲಿ ವಿದ್ಯಾರ್ಥಿಗಳು ಭಾಗವಹಿಸುವ ಮೂಲಕ ಅವಕಾಶವನ್ನು ಪಡೆದುಕೊಂಡು ಮತ್ತು ಭವಿಷ್ಯವನ್ನು ಸುರಕ್ಷಿತಗೊಳಿಸಿ ಎಂದು ಕರೆ ನೀಡಿದರು. ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಳ್ದಾಳೆ ವಿಡಿಯೋ ಮೂಲಕ ಶುಭ ಕೋರಿದರು.

ಗೀತಾ ಡಾ.ಶೈಲೇಂದ್ರ ಬೆಳ್ದಾಳೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಯುವಜನರು ತಮ್ಮ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳುವ ಮೂಲಕ ಉದ್ಯೋಗಾವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು. ಅಲ್ಲದೇ ಇಷ್ಟು ದೊಡ್ಡಮಟ್ಟದಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಿದ್ದಕ್ಕಾಗಿ ಸಂತಸ ವ್ಯಕ್ತಪಡಿಸಿದರು. ಮುಖ್ಯ ಅತಿಥಿಗಳಾಗಿ ಸೋಮಶೇಖರ್ ಬಿರಾದಾರ್ ಹಾಗೂ ಶ್ರೀಕಾಂತ್ ಮಾತನಾಡಿ, ವಿದ್ಯಾರ್ಥಿಗಳು ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಭವಿಷ್ಯ ರೂಪಿಸಿಕೊಳ್ಳಬೇಕೆಂದು ಕರೆ ನೀಡಿದರು.

ಗೌರವ ಅತಿಥಿಯಾಗಿ ಡಾ.ಸತೀಶ್ ಪ್ರತಾಪುರ್ ಉಪಸ್ಥಿತರಿದ್ದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಉದ್ಯೋಗ ಮೇಳದಲ್ಲಿ ವಿವಿಧ ಕಂಪನಿಗಳ ಪ್ರತಿನಿಧಿಗಳು ಅಭ್ಯರ್ಥಿಗಳ ಸಂದರ್ಶನ ನಡೆಸಿ, ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆ ಕೈಗೊಂಡರು. ಕಾರ್ಯಕ್ರಮದ ಸಂಯೋಜಕರಾದ ಪ್ರಾಚಾರ್ಯರು ಡಾ. ವಿನಿತಾ ಪಾಟೀಲ್ ಪ್ರಾಸ್ತಾವಿಕ ಮಾತುಗಳನ್ನಾಡಿದರು ಹಾಗೂ ಸಹ-ಸಂಯೋಜಕ ಶ್ರೀ ವಿವೇಕಾನಂದ ಬಿರಾದಾರ್ ಮೇಳದ ಯಶಸ್ಸಿಗೆ ಶ್ರಮಿಸಿದರು. ಪ್ರಾಧ್ಯಾಪಕಿ ಸಹನಾ ಪಾಟೀಲ ನಿರೂಪಿಸಿದರು

ಉದ್ಯೋಗ ಮೇಳದಲ್ಲಿ ಐಟಿ, ಕೋರ್, ಬಿಪಿಒ, ಬ್ಯಾಂಕಿಂಗ್, ವಿಮಾ, ಉತ್ಪಾದನಾ ಹಾಗೂ ಇಲೆಕ್ಟ್ರಾನಿಕ್ಸ್ ಕ್ಷೇತ್ರಗಳ ಒಟ್ಟು 43ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಭಾಗವಹಿಸಿದ್ದವು. ಇನ್ಫೋಸಿಸ್, ಟೆಕ್ ಮಹೀಂದ್ರಾ, ಎಂಫಾಸಿಸ್, ಕಾಂಸೆಂಟ್ರಿಕ್ಸ್, ಎಥರ್ ಎನರ್ಜಿ, ಬಜಾಜ್ ಅಲಿಯಾನ್ಸ್, ಎನ್‌ಐಐಟಿ, ಪಾರ್ಕ್ ಕಂಟ್ರೋಲ್ಸ್, ಕ್ಯಾಡ್ಮ್ಯಾಕ್ಸ್ ಸೊಲ್ಯೂಷನ್ಸ್, ಎಜುಟೆಕ್ ಓಪಿಪಿಒ ಇಂಡಿಯಾ ಪ್ರೈವೇಟ್ ಲಿಮಿಟೆಡ್ , ಸ್ಕೆಲೋ, ವಿಜಯ್ ಎಲೆಕ್ಟ್ರಿಕ್ ಮತ್ತು ಕಂಪನಿ ಸೇರಿದಂತೆ ಹಲವು ಕಂಪನಿಗಳು ವಿವಿಧ ಹುದ್ದೆಗಳಿಗೆ ಕಂಪನಿಯ ಮಾನವ ಸಂಪನ್ಮೂಲ ವ್ಯಕ್ತಿಗಳು ನೇಮಕಾತಿ ಮಾಡಿದರು, ಉದ್ಯೋಗ ಮೇಳಕ್ಕೆ ವಿವಿಧ ಕಾಲೇಜುಗಳ ಸುಮಾರು 1000ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೊಂದಣಿ ಮಾಡಿಕೊಂಡು ಆಯಾ ಕಂಪೆನಿಯ ಸಂದರ್ಶನ ಪಡೆದರು. ನಂತರ ಸುಮಾರು 327 ವಿದ್ಯಾರ್ಥಿಗಳಿಗೆ ಉದ್ಯೋಗ ನೇಮಕಾತಿ ಪತ್ರ/



ಆದೇಶ ಪತ್ರ ವಿತರಿಸಿದರು

ವಿವಿಧ ಕ್ಷೇತ್ರಗಳ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಿದ್ದು, ನೂರಾರು ಉದ್ಯೋಗಾಕಾಂಕ್ಷಿ ಯುವಕರು ಮತ್ತು ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡರು. ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಾಪಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಉದ್ಯೋಗ ಮೇಳವು ವಿದ್ಯಾರ್ಥಿಗಳು ಮತ್ತು ಉದ್ಯೋಗಾಕಾಂಕ್ಷಿಗಳಿಗೆ ಉತ್ತಮ ಅವಕಾಶ ಕಲ್ಪಿಸಿದ ಯಶಸ್ವಿ ಕಾರ್ಯಕ್ರಮವಾಗಿ ಮೂಡಿಬಂದಿತು.